ದಾವಣಗೆರೆ,
ಬೆಂಗಳೂರು,
ಕೋಲಾರ,
ಹಾಸನ,
ಚಿತ್ರದುರ್ಗ,
ವಿಜಯನಗರ,
ಬಳ್ಳಾರಿ,
ರಾಯಚೂರು,
ವಿಜಯಪುರ,
ಕಲಬುರ್ಗಿ

ಸಂಪಾದಕರು: ಎಸ್.ಕೆ.ಒಡೆಯರ್ ಸ್ವಾಭಿಮಾನಿಗಳ ಪತ್ರಿಕೆ www.pavitrapraja.com

# ಪವಿತ್ರ ಪ್ರಜಾ

RNI:KARKAN 2007/22780 DAVANAGERE

ಕನ್ನಡ ದಿನಪತ್ರಿಕೆ

PAVITRAPRAJA KANNADA DAILY PAPER

ಉಪ ಸಂಪಾದಕರು: ಸುಚಿತ್ರ ಎಸ್.ಒಡೆಯರ್, MBA

ಸಂಪುಟ:17
VOLUME:17
ಸಂಚಿಕೆ:210
ISSUE:210
ದಿನಾಂಕ:27-06-2023
Date: 27-06-2023
ಮಂಗಳವಾರ. TUESDAY
ಪುಟ:4 Page:4
ರೂ:2-00 Rs:2-00

Editor: S.K.Wadeyar E-mail: pavitrapraja@gmail.com KA/SK/CTA-806/2021-23 Cell: 9141920642 Sub-Editor: Supritha Wadeyar

## ಬೇಡಿಕೆ ಹೆಚ್ಚಿದೆ, ಆದರೆ ಬಸ್‌ಗಳ ಕೊರತೆಯಿದೆ: ಬೆಂಗಳೂರು ಫೋರಂ

**ಬೆಂಗಳೂರು:** ಸುಸ್ಥಿರ ನಗರಗಳನ್ನು ನಿರ್ಮಿಸುವಲ್ಲಿ ಸಾರ್ವಜನಿಕ ಧ್ವನಿಯನ್ನು ವರ್ಧಿಸಲು ನಗರದಲ್ಲಿನ ನಾಗರಿಕ ಸಮಾಜದ ಗುಂಪುಗಳು 'ಲೆಟ್ಸ್ ಮೂವ್ ಬೆಂಗಳೂರು' ಎಂಬ ಮುಕ್ತ ನಾಗರಿಕರ ಸಮಾವೇಶದಲ್ಲಿ ಭಾಗವಹಿಸಿದ್ದವು. ಎಲ್ಲರಿಗೂ ಹೆಚ್ಚಿನ ಬಸ್‌ಗಳನ್ನು ಒದಗಿಸಿ ಮೂಲಭೂತ ಸೌಕರ್ಯಗಳನ್ನು ನಿರ್ಮಿಸಲು ಸರ್ಕಾರ ಮುಂದಾಗಬೇಕು ಎಂದು ನಾಗರಿಕರು ಮತ್ತು ತಜ್ಞರು ಸಲಹೆ ನೀಡಿದರು.



ಶಕ್ತಿ ಯೋಜನೆಯನ್ನು ಶ್ಲಾಘಿಸಿದ ಮಾಜಿ ಸಂಸದ ಮತ್ತು ಕಾಂಗ್ರೆಸ್ ವಕ್ತಾರ ಪ್ರೊ. ರಾಜೀವ್ ಗೌಡ ಅವರು. 'ಬೆಳಕಿನ ದೀಪ' ಎಂದು ಕರೆದರು. 'ಪ್ರಯಾಣಿಕರ ಸಂಖ್ಯೆ 14 ಲಕ್ಷಕ್ಕೆ ಜಿಗಿದಿದೆ. ಕಳೆದ ಎರಡು ವಾರಗಳಲ್ಲಿ ನಾವು ಸ್ಥೂಲವಾಗಿ 7 ಲಕ್ಷ ಹೊಸ ಬಸ್ ಪ್ರಯಾಣಿಕರನ್ನು ಊಹಿಸಬಹುದು. ಸಾರ್ವಜನಿಕ ಸಾರಿಗೆಯನ್ನು ತೆಗೆದುಕೊಳ್ಳಲು ಬಯಸುವ ಜನರು ನಮ್ಮಲ್ಲಿದ್ದಾರೆ. ಆದರೆ, ಬಸ್‌ಗಳ ಸಂಖ್ಯೆಯು ಅಸಮರ್ಪಕವಾಗಿದೆ. ಬೇಡಿಕೆಯನ್ನು ಪೂರೈಸಲು, ಸರ್ಕಾರವು ಖಾಸಗಿ ಕಂಪನಿಗಳೊಂದಿಗೆ ಪಾಲುದಾರಿಕೆ ಮಾದರಿಯಲ್ಲಿ ಕೆಲಸ ಮಾಡಬಹುದು ಅಥವಾ ಹೆಚ್ಚಿನ ಬಸ್‌ಗಳಿಗೆ ಸಿಎಸ್‌ಆರ್ ಹಣವನ್ನು ಅನುಮತಿಸಬಹುದು' ಎಂದು ಅವರು ಸಲಹೆ ನೀಡಿದರು.

ಚರ್ಚೆಯನ್ನು ಆಯೋಜಿಸಿದ್ದ ಗ್ರೀನ್‌ಪೀಸ್, ನಗರದಲ್ಲಿ ಖಾಸಗಿ ವಾಹನಗಳ ಘಾತೀಯ ಬೆಳವಣಿಗೆ ಕಂಡುಬಂದಿದೆ. ಅದು ಈಗ ಒಂದು ಕೋಟಿಗೆ ತಲುಪಿದೆ.

ಐಐಎಸ್‌ಸಿ ಸುಸ್ಥಿರ ಸಾರಿಗೆ ಪ್ರಯೋಗಾಲಯದ ಸಂಚಾಲಕ ಪ್ರೊ. ಆಶಿಶ್ ವರ್ಮಾ ಮಾತನಾಡಿ, ಕಳೆದ 25 ವರ್ಷಗಳಲ್ಲಿ ವಿವಿಧ ಸರ್ಕಾರಗಳು ಕಾಂಕ್ರೀಟ್ ಮೂಲಸೌಕರ್ಯಗಳಾದ ಫ್ಲೈಓವರ್‌ಗಳು ಮತ್ತು ಎಲಿವೇಟೆಡ್ ರಸ್ತೆಗಳ ನಿರ್ಮಾಣದಲ್ಲಿ ಹೂಡಿಕೆ ಮಾಡಿದ್ದು, ಹೆಚ್ಚಿನ ಖಾಸಗಿ ವಾಹನಗಳ ಖರೀದಿಗೆ ಉತ್ತೇಜನ ನೀಡಿವೆ. ಅಂತಹ ಯೋಜನೆಗಳು 'ಪರಿಸರ ಅವನತಿ, ಜನರ ಸ್ಥಳಾಂತರ ಮತ್ತು ಹಸಿರು ಸ್ಥಳಗಳ ನಷ್ಟದ ವೆಚ್ಚದಲ್ಲಿ' ಬಂದಿವೆ ಎಂದು ಅವರು ಹೇಳಿದರು.

ಸುಮಾರು 162 ಜನರು ಆಫ್‌ಲೈನ್ ಸಮೀಕ್ಷೆಯಲ್ಲಿ ಭಾಗವಹಿಸಿದ್ದಾರೆ. ಪ್ರತಿಕ್ರಿಯಿಸಿದವರಲ್ಲಿ ಶೇ 15 ರಷ್ಟು ಮಹಿಳೆಯರು ಪ್ರತ್ಯೇಕ ಬಸ್‌ಗಳ ಅಗತ್ಯವನ್ನು ಬೆಂಬಲಿಸಿರುವುದನ್ನು ತೋರಿಸಿದೆ. ಶೇ 25 ರಷ್ಟು ಮಿನಿ ಬಸ್‌ಗಳು ತಮ್ಮ ಗುರಿಯ ಕೊನೆಯ ಸಂಪರ್ಕಕ್ಕೆ ಸಹಾಯ ಮಾಡುತ್ತದೆ ಎಂದಿದ್ದಾರೆ ಮತ್ತು ಶೇ 59 ರಷ್ಟು ಜನರು ಹೆಚ್ಚಿನ ಬಸ್ ಮಾರ್ಗಗಳು ಮತ್ತು ಬಸ್ಸುಗಳ ಪರವಾಗಿದ್ದಾರೆ. ಇದರಿಂದ, ಬಸ್ಸುಗಳಿಗಾಗಿ ಕಾಯುವ ಸಮಯವನ್ನು ಕಡಿಮೆಗೊಳಿಸಬಹುದು ಎಂದಿದ್ದಾರೆ.

## ಹಿರಿಯ ಯಕ್ಷಗಾನ ಕಲಾವಿದ ತೋನ್ಸೆ ಜಯಂತ್ ಕುಮಾರ್ ನಿಧನ

**ಮಂಗಳೂರು:** ಹಿರಿಯ ಯಕ್ಷಗಾನ ಕಲಾವಿದ ತೋನ್ಸೆ ಜಯಂತ್ ಕುಮಾರ್ ಸೋಮವಾರ ಮುಂಜಾನೆ ಉಡುಪಿಯಲ್ಲಿ ನಿಧನರಾಗಿದ್ದಾರೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಅವರಿಗೆ 78 ವರ್ಷ ವಯಸ್ಸಾಗಿತ್ತು. ಮೃತರು ಪತ್ನಿ ಹಾಗೂ ಮೂವರು ಪುತ್ರರನ್ನು ಅಗಲಿದ್ದಾರೆ.

ಕುಮಾರ್ ಅವರು ಯಕ್ಷಗಾನ ವೇಷಧಾರಿಯಾಗಿ ನಂತರ ಯಕ್ಷಗಾನ ಗುರುಗಳಾಗಿ ಮಿಂಚಿದ್ದು, ಈ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಉಡುಪಿ ಯಕ್ಷ ಶಿಕ್ಷಣ ಟ್ರಸ್ಟ್ ನ ಗುರುಗಳಾಗಿದ್ದ ಅವರು, ಆರಂಭದಿಂದಲೂ ಅದರ ಯಶಸ್ಸಿಗೆ ಕಾರಣರಾಗಿದ್ದರು.

ಯಕ್ಷಗಾನ ಅಕಾಡೆಮಿ, ಶ್ರೀರಾಮ ವಿಠಲ, ಯಕ್ಷಗಾನ ಕಲಾರಂಗ ಪ್ರಶಸ್ತಿ ಸೇರಿದಂತೆ ಹಲವಾರು ಗೌರವಗಳನ್ನು ಪಡೆದಿರುವ ತೋನ್ಸೆ ಜಯಂತ್ ಕುಮಾರ್ ಅವರು ಮಾಜಿ ರಾಷ್ಟ್ರಪತಿ ಶಂಕರ್ ದಯಾಳ್ ಶರ್ಮಾ ಅವರಿಂದ ಗೌರವ ಸ್ವೀಕರಿಸಿದ್ದರು.



## ಪ್ರತಿ ಜೀವಿಗೂ ಬದುಕುವ ಹಕ್ಕಿದೆ ಅರಣ್ಯ, ಜೀವಿಶಾಸ್ತ್ರ ಸಚಿವ ಈಶ್ವರ ಖಂಡ್ರೆ

**ಬೆಂಗಳೂರು** : ಅರಣ್ಯ ಮತ್ತು ಮೃಗಪಕ್ಷಿಗಳು ಅನಾದಿ ಕಾಲದಿಂದಲೂ ನಮ್ಮ ಸಂಸ್ಕೃತಿ, ಧರ್ಮದ ಭಾಗವಾಗಿದೆ. ಈ ಬ್ರಹ್ಮಾಂಡದಲ್ಲಿ ಎಲ್ಲ ಜೀವಿಗಳಿಗೂ ಬದುಕುವ ಸಮಾನ ಅವಕಾಶವಿದೆ, ಹಕ್ಕಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ.ವಿಧಾನಸೌಧದಲ್ಲಿಂದು ಅರಣ್ಯ ಇಲಾಖೆಯ ಲಾಂಛನ (ಲೋಗೋ) ಬಿಡುಗಡೆ ಮಾಡಿ ಮಾತನಾಡಿದ ಅವರು, ಜನರ ಆಶೀರ್ವಾದದಿಂದ ಹೊಸ ಸರ್ಕಾರ ಬಂದಿದೆ. ರಾಜ್ಯದೆಲ್ಲೆಡೆ ಹೊಸ ಹುರುಪು ಮೂಡಿದೆ. ಈ ಸಂದರ್ಭದಲ್ಲಿ ಅರಣ್ಯ ಇಲಾಖೆಗೂ ಹೊಸ ಹುರುಪು ನೀಡಲು ಲಾಂಛನ ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿದರು.ಅರಣ್ಯ ಸಚಿವಾಲಯ ಹಲವು ದಶಕಗಳಿಂದ ಅಸ್ತಿತ್ವದಲ್ಲಿದೆ. ಆದರೆ ಈ ಇಲಾಖೆಗೆ ತನ್ನದೇ ಆದ ಸ್ವಂತ ಲಾಂಛನ ಇರಲಿಲ್ಲ. ಈಗ ಆ ಕಾಲ ಕೂಡಿ ಬಂದಿದೆ. ಇಲಾಖೆಯ ಉದ್ದೇಶ, ಮೌಲ್ಯಗಳು ಮತ್ತು ಕಾರ್ಯವನ್ನು ಪ್ರತಿನಿಧಿಸುವ ರೀತಿಯಲ್ಲಿ ಲಾಂಛನವನ್ನು ರೂಪಿಸಲಾಗಿದೆ ಎಂದರು. ಇಲಾಖೆಯ



ಲಾಂಛನವು ಸಮಾಜದಲ್ಲಿ ವಿಶಿಷ್ಟ ಅಸ್ಮಿತೆ ಸ್ಥಾಪಿಸುತ್ತದೆ. ಜನರಲ್ಲಿ ಅರಣ್ಯ ಇಲಾಖೆಯ ಬಗ್ಗೆ ಹೆಮ್ಮೆ ಮೂಡಿಸಲು ನೆರವಾಗುತ್ತದೆ. ಇನ್ನು ಮುಂದೆ ಇಲಾಖೆಯ ಅಧಿಕೃತ ವೆಬ್‌ಸೈಟ್, ಸಾಮಾಜಿಕ ಮಾಧ್ಯಮ ತಾಣಗಳು, ಮತ್ತು ಪ್ರಚಾರ ಸಾಮಗ್ರಿಗಳಲ್ಲಿಈ ಲೋಗೋ ಬಳಸಲಾಗುವುದು ಎಂದು ತಿಳಿಸಿದರು.ಕರ್ನಾಟಕ ಅರಣ್ಯ ಇಲಾಖೆಯ ಕಾರ್ಯ, ಉದ್ದೇಶವನ್ನು ಬಿಂಬಿಸುವಂತಹ ತನ್ನದೇ ಆದ ಲಾಂಛನ ಅಳವಡಿಸಿಕೊಳ್ಳಲು ನಿರ್ಧರಿಸಿ ಕಳೆದ ವರ್ಷ ವಿದ್ಯಾರ್ಥಿಗಳನ್ನು, ಕಲಾವಿದರು ಮತ್ತು ಸಾರ್ವಜನಿಕರಿಂದ ಲಾಂಛನ ರಚಿಸುವಂತೆ ಕೋರಿ ಲೋಗೋ ವಿನ್ಯಾಸ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು. ರಾಜ್ಯಾದ್ಯಂತ ಒಟ್ಟು 309 ಲೋಗೋ ವಿನ್ಯಾಸಗಳು ಬಂದಿದ್ದವು. ಈ ಎಲ್ಲವನ್ನೂ ಪರಿಶೀಲಿಸಲು, ಒಂದು ಸಮಿತಿಯನ್ನು ರಚಿಸಿ, 3 ಹಂತಗಳಲ್ಲಿ ಸ್ಪರ್ಧೆಯನ್ನು ನಡೆಸಿ, ಅಂತಿಮವಾಗಿ ಈ ಲೋಗೋ ಆಯ್ಕೆ ಮಾಡಲಾಗಿದೆ ಎಂದರು.ಬಹುಮಾನದ ಮೊತ್ತ 50 ಸಾವಿರ : ಸ್ಪರ್ಧೆಯ ವಿಜೇತ ಮೈಸೂರಿನ ಶಮಂತ್ ಗೊರೂರು ಅವರಿಗೆ 20 ಸಾವಿರ ರೂ. ನಗದು ಬಹುಮಾನ, ಪ್ರಮಾಣ ಪತ್ರವನ್ನೂ ಸಚಿವರು ಇದೇ ವೇಳೆ ಪ್ರದಾನ ಮಾಡಿದರು. ಈ ಮೊತ್ತವನ್ನು 50 ಸಾವಿರಕ್ಕೆ ಹೆಚ್ಚಿಸುವುದಾಗಿಯೂ ಪ್ರಕಟಿಸಿದರು.ನಮ್ಮ ರಾಷ್ಟ್ರ ಲಾಂಛನದಲ್ಲೂ ನಾಲ್ಕು ಮುಖದ ಸಿಂಹ ಇದೆ. ನಮ್ಮ ರಾಜ್ಯದ ಲಾಂಛನದಲ್ಲೂ ಸಿಂಹ ಇದೆ. ಜೊತೆಗೆ ಸಿಂಹದ ದೇಹ ಮತ್ತು ಸೊಂಡಿಲಿರುವ ಕಾಲ್ಪನಿಕ ಮೃಗವೂ ಇದೆ. ಹಸಿರೂ ಇದೆ ಮಿಗಿಲಾಗಿ ಗಂಡ ಬೇರುಂಡ ಪಕ್ಷಿ ಇದೆ. ವಿಧಾನಸೌಧದ ಗೋಪುರದಲ್ಲೂ ಸಿಂಹ ಲಾಂಛನವಿದೆ. ಅಂದರೆ ವನ್ಯಮೃಗಗಳು ನಮ್ಮ ಆಡಳಿತದಲ್ಲಿ ಹಾಸು ಹೊಕ್ಕಾಗಿವೆ ಎಂದರೆ ತಪ್ಪಾಗಲಾರದು ಎಂದರು.ಕರ್ನಾಟಕ ನಕ್ಷೆಯ ಆಕಾರದಲ್ಲಿರುವ ಲಾಂಛನದಲ್ಲಿ ರಾಷ್ಟ್ರೀಯ ಪ್ರಾಣಿ ಹುಲಿ, ರಾಜ್ಯಪಕ್ಷಿ ನೀಲಕಂಠ, ರಾಜ್ಯ ಪ್ರಾಣಿ ಆನೆ, ರಾಜ್ಯದ ಹಿರಿಮೆ ಮತ್ತು ಗರಿಮೆಯಾದ ಶ್ರೀಗಂಧ, ರಾಜ್ಯ ಚಿಟ್ಟೆ ಸೌಥೆರ್ನ್ ಬರ್ಡ್ ವಿಂಗ್, ಮತ್ತು ಇವೆಲ್ಲಕ್ಕೂ ಮೂಲಾಧಾರವಾದ ಜಲಸಂಪನ್ಮೂಲವಿದ್ದು ಇಲಾಖೆಯನ್ನು ಸೂಕ್ತವಾಗಿ ಪ್ರತಿನಿಧಿಸುತ್ತದೆ ಎಂದರು.

## ಕರ್ನಾಟಕ, ಮಹಾರಾಷ್ಟ್ರದ ಬಿಪಿಎಲ್ ಕುಟುಂಬಗಳಲ್ಲಿ ಮುಟ್ಟಿನ ಬಗ್ಗೆ ಅತಿಹೆಚ್ಚು ಮೌಢ್ಯಗಳಿವೆ: ಸಮೀಕ್ಷೆ

**ಬೆಂಗಳೂರು:** ಕರ್ನಾಟಕ ಮತ್ತು ಮಹಾರಾಷ್ಟ್ರಗಳಲ್ಲಿನ ಬಡತನ ರೇಖೆಗಿಂತ ಕೆಳಗಿರುವ (ಬಿಪಿಎಲ್) ಕುಟುಂಬಗಳಲ್ಲಿ ಅತಿ ಹೆಚ್ಚು ಮುಟ್ಟಿನ ಆರೋಗ್ಯ ಮತ್ತು ನೈರ್ಮಲ್ಯ ನಿರ್ವಹಣೆಗೆ ಸಂಬಂಧಿಸಿದ ಮೌಢ್ಯಗಳನ್ನು ಹೊಂದಿವೆ ಎಂದು ಯುನೆಸ್ಕೋ ಇತ್ತೀಚಿನ ಸಮೀಕ್ಷೆಯ ವರದಿಯನ್ನು ತೋರಿಸಿದೆ.

ಕರ್ನಾಟಕದ ಕೆಲವು ಸಮುದಾಯಗಳು ಇಂದಿಗೂ ಮಹಿಳೆಯರನ್ನು ಪ್ರತ್ಯೇಕಿಸುವ ಪದ್ಧತಿಯನ್ನು ಅನುಸರಿಸುತ್ತಿವೆ. ಅವರನ್ನು ಅಸ್ಪೃಶ್ಯರಂತೆ ನಡೆಸಿಕೊಳ್ಳಲಾಗುತ್ತದೆ ಮತ್ತು ಇತರ ಕುಟುಂಬದ ಸದಸ್ಯರೊಂದಿಗೆ ಊಟ ಮಾಡಲು ಸಹ ಅನುಮತಿಸುವುದಿಲ್ಲ. ಅಲ್ಲದೆ, ಮನೆಯೊಳಗೆ ಇರಲು ಕೂಡ ಅವಕಾಶವಿಲ್ಲ ಎಂದು ಸಮಗ್ರ ಶಿಕ್ಷಣ ಕರ್ನಾಟಕ, ಯೋಜನಾ ನಿರ್ದೇಶಕಿ ಬಿ.ಬಿ. ಕಾವೇರಿ ಹೇಳಿದರು.

2019 ರಲ್ಲಿ ಪ್ರಾರಂಭವಾದ ಯುನೆಸ್ಕೋ ಮತ್ತು ಪ್ರಾಕ್ಟರ್ ಮತ್ತು ಗ್ಯಾಂಬಲ್ (P&G) ವಿಸ್ಪರ್‌ನ #KeepGirlsinSchool ಅಭಿಯಾನವು 'ಸ್ಪಾಟ್‌ಲೈಟ್ ರೆಡ್' ಎಂಬ ಶೀರ್ಷಿಕೆಯಡಿ ಆರು ರಾಜ್ಯಗಳಲ್ಲಿ ಸಮೀಕ್ಷೆ ನಡೆಸಿತು. ಅವುಗಳೆಂದರೆ, ಕರ್ನಾಟಕ, ಮಹಾರಾಷ್ಟ್ರ, ಪಶ್ಚಿಮ ಬಂಗಾಳ, ಆಂಧ್ರ ಪ್ರದೇಶ, ಉತ್ತರ ಪ್ರದೇಶ ಮತ್ತು ಕೇಂದ್ರಾಡಳಿತ ಪ್ರದೇಶವಾದ ದೆಹಲಿಯಾಗಿದೆ.

ಸಮೀಕ್ಷೆಗೆ ಒಳಗಾದ ಒಟ್ಟು 1,800 ಜನರಲ್ಲಿ, ಕರ್ನಾಟಕದ ಗ್ರಾಮೀಣ ಭಾಗದ ಶೇ 33 ರಷ್ಟು ಹುಡುಗರು ಮುಟ್ಟಿನ ಕುರಿತು ತಪ್ಪು ಕಲ್ಪನೆಗಳನ್ನು ಹೊಂದಿದ್ದಾರೆ. ಮೌಢ್ಯ ಮತ್ತು ತಪ್ಪುಗ್ರಹಿಕೆಗಳಿಗೆ ಜಾತಿಯೂ ಕೂಡ ಪ್ರಮುಖ ಕಾರಣವಾಗಿದೆ ಎಂದು ಬಹಿರಂಗಪಡಿಸಿದೆ.

'ಮಹಿಳೆಯರನ್ನು ದೇವಾಲಯಗಳಿಂದ ನಿರ್ಬಂಧಿಸುವುದು, ಧಾರ್ಮಿಕ ನೈವೇದ್ಯಗಳನ್ನು ಮುಟ್ಟದಿರುವುದು, ಅಡುಗೆ ಕೋಣೆ ಅಥವಾ ಮನೆಯಲ್ಲಿ ಪೂಜಾ ಕೊಠಡಿಗಳನ್ನು ಪ್ರವೇಶಿಸಬಾರದು' ಎನ್ನುವ ಕಟ್ಟುಪಾಡುಗಳು ಇಂದಿಗೂ ಚಾಲ್ತಿಯಲ್ಲಿವೆ ಎಂದು ಯುನೆಸ್ಕೋದ ಲಿಂಗ ತಜ್ಞ ಡಾ ಹುಮಾ ಮಸೂದ್ ಹೇಳಿದ್ದಾರೆ.

ಸರ್ಕಾರವು ಕೈಗೊಂಡ ಹಲವಾರು ಯೋಜನೆಗಳು ಮತ್ತು ಉಪಕ್ರಮಗಳು ಮುಟ್ಟಿಗೆ ಸಂಬಂಧಿಸಿದ ನಿಷೇಧವನ್ನು ತೊಡೆದುಹಾಕಲು ಸಹಾಯ ಮಾಡಿಲ್ಲ ಎಂದು ಸಂಶೋಧನೆಗಳು ತೋರಿಸಿವೆ.

ಹುಡುಗಿಯರಿಗೆ ಸ್ಯಾನಿಟರಿ ಪ್ಯಾಡ್‌ಗಳನ್ನು ವಿತರಿಸುವ ಉದ್ದೇಶದಿಂದ ಜಾರಿಗೆ ತರಲಾಗಿದ್ದ ಕರ್ನಾಟಕದ ಶುಚಿ ಯೋಜನೆಯನ್ನು 2020 ರಲ್ಲಿ ನಿಲ್ಲಿಸಲಾಯಿತು ಮತ್ತು ನಂತರ ಯೋಜನೆಯನ್ನು ಶುರು ಮಾಡಿಲ್ಲ ಎಂದು ವರದಿಯು ಗಮನಸೆಳೆದಿದೆ. ಈ ಯೋಜನೆ ಜಾರಿಯಾಗದಿರುವುದಕ್ಕೆ ಪ್ಯಾಡ್‌ಗಳ ಕಳಪೆ ಗುಣಮಟ್ಟ ಮತ್ತು ಇಲಾಖೆ ವರ್ಗಾವಣೆಯಂತಹ ಅನೇಕ ಕಾರಣಗಳನ್ನು ರಾಜ್ಯ ಸರ್ಕಾರ ನೀಡಿದೆ.

ಮಹಿಳೆಯರು ಋತುಚಕ್ರದ ಬಗ್ಗೆ ಮಾತನಾಡಲು ಪ್ರಾರಂಭಿಸಲು ಇದು ಸಕಾಲವಾಗಿದೆ. ಭಾರತದಲ್ಲಿ ಮುಟ್ಟಿನ ಆರೋಗ್ಯವನ್ನು ಸಾಮಾನ್ಯ ಎಂದು ಪರಿಗಣಿಸುವುದನ್ನು ಕ್ರಾಂತಿಗೊಳಿಸಬಹುದಾದ ಏಕೈಕ ಮಾರ್ಗವೆಂದರೆ ಎಲ್ಲಾ ಲಿಂಗಗಳು ಮುಟ್ಟನ್ನು ಸಾಮಾನ್ಯವಾಗಿ ಸ್ವೀಕರಿಸುವುದಾಗಿದೆ ಎಂದು ತಜ್ಞರು ಹೇಳಿದರು.

## ರಾಜ್ಯದಲ್ಲಿ ಡ್ರಗ್ಸ್ ಹಾವಳಿಗೆ ಕಡಿವಾಣ ಹಾಕುತ್ತೇವೆ : ಡಿಸಿಎಂ

**ಬೆಂಗಳೂರು:**ಮಾದಕ ದ್ರವ್ಯ ವಸ್ತುಗಳ ಹಾವಳಿ ರಾಜ್ಯದಲ್ಲಿ ನಿಯಂತ್ರಣದಲ್ಲಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಕಡಿವಾಣ ಹಾಕುವುದಾಗಿ ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ವಿಶ್ವ ಮಾದಕ ವಸ್ತು ವಿರೋಧಿ ದಿನದ ಅಂಗವಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಕಾಲ್ನಡಿಗೆ ಜಾಥಾದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಮಾದಕ ವಸ್ತುಗಳು ಜೀವನವನ್ನೇ ಹಾಳು ಮಾಡಲಿದೆ. ಪೊಲೀಸರು ಪ್ರಕರಣ ದಾಖಲಿಸಿ ಕ್ರಮ ಕೈಗೊಳ್ಳುವುದು ಒಂದೆಡೆಯಾದರೆ, ದುಶ್ಚಟಗಳು ವಿದ್ಯಾರ್ಥಿಗಳ ಭವಿಷ್ಯವನ್ನು ಕತ್ತಲು ಮಾಡುತ್ತದೆ ಎಂದು ಎಚ್ಚರಿಸಿದರು.

ಇತ್ತೀಚೆಗೆ ರಾಜ್ಯದಲ್ಲಿ ಮಾದಕ ವಸ್ತು ವಿರೋಧಿ ಕಾರ್ಯಾಚರಣೆಯಲ್ಲಿ ಹಲವಾರು ಮಂದಿ ಚಲನಚಿತ್ರದ ನಟ-ನಟಿಯರು, ಗಣ್ಯರ ಮಕ್ಕಳು ಸಿಕ್ಕಿಬಿದ್ದಿದ್ದನ್ನು ನೋಡಿದ್ದೇವೆ. ಮುಂದಿನ ದಿನಗಳಲ್ಲಿ ನೀವು ಮಾದಕ ವಸ್ತುಗಳನ್ನು ಬಳಸಬಾರದು, ನಿಮ್ಮ ಸ್ನೇಹಿತರು ಬಳಸಲು ಅವಕಾಶ ನೀಡಬಾರದು. ಒಂದು ವೇಳೆ ಯಾರಾದರೂ ಮಾದಕ ವಸ್ತು ಬಳಕೆ ಮಾಡುತ್ತಿರುವುದು ಕಂಡುಬಂದರೆ ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಿ ಎಂದು ಸಲಹೆ ನೀಡಿದರು.

ರಾಜ್ಯಸರ್ಕಾರ ಮಾದಕ ದ್ರವ್ಯದ ವಿರುದ್ಧ ಕಠಿಣ ಕ್ರಮ ಕೈಗೊಂಡಿದೆ. ಹೊರರಾಜ್ಯಗಳಿಂದ ಕಳ್ಳಸಾಗಾಣಿಕೆ ಈಗ ನಿಯಂತ್ರಣದಲ್ಲಿದೆ. ಈ ನಿಟ್ಟಿನಲ್ಲಿ ಮತ್ತಷ್ಟು ಜಾಗೃತಿ ಅಗತ್ಯವಿದ್ದು ಇಂದು ಆಯೋಜನೆಗೊಂಡಿದ್ದ ಕಾಲ್ನಡಿಗೆ ಜಾಥಾ ಐತಿಹಾಸಿಕವಾಗಿದೆ.

3 ವರ್ಷದ ಹಿಂದೆ ತಾವು ವಾಕ್ ಫಾರ್ ವಾಟರ್ ಎಂದು ಮೇಕೆದಾಟುವಿನಿಂದ ಬೆಂಗಳೂರುವರೆಗೆ ಪಾದಯಾತ್ರೆ ಮಾಡಿದ್ದನ್ನು ಸ್ಮರಿಸಿಕೊಂಡರು. ಹಾಗೆಯೇ ರಾಹುಲ್‌ಗಾಂಧಿಯವರು ದೇಶದ ಐಕ್ಯತೆ, ನಿರುದ್ಯೋಗ ನಿವಾರಣೆ, ಬೆಲೆ ಏರಿಕೆ ವಿರುದ್ಧ ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೂ ಭಾರತ್ ಜೋಡೋ ಯಾತ್ರೆ ನಡೆಸಿದರು.

ಸ್ವಾತಂತ್ರ್ಯೋವದ 75 ದಿನಾಚರಣೆಯ ವೇಳೆ ಫ್ರೀಡಂ ಮಾರ್ಚ್‌ನಲ್ಲಿ ರೈಲ್ವೆ ನಿಲ್ದಾಣದಿಂದ ಬಸವನಗುಡಿ ಯವರೆಗೂ ನಡೆಯಲಾಗಿತ್ತು. ಕಾಲ್ನಡಿಗೆಗಳು ಐತಿಹಾ ಸಿಕವಾಗಿ ಉಳಿಯಲಿವೆ. ಮುಂದೊಂದು ದಿನ ಯೌವ್ವನ ದಲ್ಲಿ ತಾವು ಕೂಡ ಮಾದಕ ವಸ್ತುಗಳ ವಿರುದ್ಧ ಹೋರಾಟ ನಡೆಸಿದ್ದೇನೆ ಎಂದು ಮುಂದಿನ ದಿನಗಳಲ್ಲಿ ನೀವು ನಿಮ್ಮ ಮಕ್ಕಳಿಗೆ ಹೇಳಿಕೊಳ್ಳಬಹುದು ಎಂದು ಹೇಳಿದರು.



ಇಡೀ ವಿಶ್ವವೇ ಮಾದಕ ವಸ್ತು ವಿರುದ್ಧ ಜಾಗೃತಿಗೊಳ್ಳಬೇಕು. ಆರೋಗ್ಯವೇ ಭಾಗ್ಯ ಈ ನಿಟ್ಟಿನಲ್ಲಿ ಯುವಜನಾಂಗ ಮತ್ತು ಸಾರ್ವಜನಿಕರು ದುಶ್ಚಟಗಳಿಂದ ದೂರ ಇರಬೇಕು. ಇಲ್ಲವಾದರೆ ಭವಿಷ್ಯದ ಪ್ರಜೆಗಳ ಆರೋಗ್ಯ ಹದಗೆಡಲಿದೆ.

ಶಾಲಾ-ಕಾಲೇಜುಗಳಿಂದ ಹಿಡಿದು ಎಲ್ಲೆಡೆ ವ್ಯಾಪಕ ಜನಜಾಗೃತಿಯಾಗಬೇಕು.

ಮುಂದಿನ ದಿನಗಳಲ್ಲಿ ನಿಮ್ಮಲ್ಲಿಯೂ ಉತ್ತಮ ಸಾಧನೆ ಮಾಡುವವರು ಇರಬ ಹುದು. ನೀವೂ ಕೂಡ ಡಿ.ಕೆ.ಶಿವಕುಮಾರ್‌ರಂತೆ ಆಗಬಹುದು. ನಾನೂ ಕೂಡ ವಿದ್ಯಾರ್ಥಿಯಾಗಿದ್ದಾಗಿನಿಂದ ಓಡಾಡಿದ್ದೇನೆ, ನಲಿದಿದ್ದೇನೆ, ಆಟವಾಡಿದ್ದೇನೆ. ಇಂದು ನಿಮ್ಮೊಂದಿಗೆ ವಿಧಾನಸೌಧದಿಂದ ಕಂಠೀರವ ಕ್ರೀಡಾಂಗಣದವರೆಗೆ ನಡೆಯಬೇಕೆಂದು ಸಿದ್ಧವಾಗಿ ಬಂದಿದ್ದೇನೆ ಎಂದು ಹೇಳಿದರು.

ಶಾಸನ ರಚಿಸುವ ವಿಧಾನಸೌಧ ಮತ್ತು ನ್ಯಾಯಾಂಗದ ಪ್ರಮುಖ ಕಚೇರಿ ಹೈಕೋರ್ಟ್ ಎದುರುಬದಿರಿರುವುದು ವಿಶ್ವದಲ್ಲೇ ಬೆಂಗಳೂರಿನಲ್ಲಿ ಮಾತ್ರ. ಇಲ್ಲಿ ಉತ್ತಮ ವ್ಯವಸ್ಥೆ ಇದೆ. ಅದನ್ನು ಬಳಸಿಕೊಂಡು ಸಾಮಾಜಿಕ ಅನಿಷ್ಟಗಳ ವಿರುದ್ಧ ನಾವು ಹೋರಾಡಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಮಾದಕ ವಸ್ತು ವಿರೋ ದಿನದ ಪ್ರತಿಜ್ಞಾ ವಿಧಿ ಬೋಧಿಸಿದರು.

ಬಳಿಕ ಕಂಠೀರವ ಕ್ರೀಡಾಂಗಣದಲ್ಲಿ ಮಕ್ಕಳೊಂದಿಗೆ ಕುಳಿತು ಉಪಹಾರ ಸೇವಿಸಿದರು. ಈ ಸಂದರ್ಭದಲ್ಲಿ ಯುವಜನ ಮತ್ತು ಕ್ರೀಡಾ ಸಚಿವ ಬಿ.ನಾಗೇಂದ್ರ, ವಿಧಾನ ಪರಿಷತ್ ಸದಸ್ಯ ನಾಗರಾಜ್, ಅಪರ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಮತ್ತಿತರರು ಉಪಸ್ಥಿತರಿದ್ದರು.

## ಶಾಲಾ ಪಠ್ಯ ಪುಸ್ತಕದಲ್ಲಿ ಡ್ರಗ್ಸ್ ವಿರುದ್ಧ ಜಾಗೃತಿ; ಹೊಸ ಪ್ರಯತ್ನಕ್ಕೆ ಸರ್ಕಾರದ ಮೊರೆ ಹೋದ ಪೊಲೀಸ್ ಕಮಿಷನರ್

**ಬೆಂಗಳೂರು:** ಇಡೀ ರಾಜ್ಯದಲ್ಲಿ ಗಾಂಜಾ ನಶೆ ಪಸರಿಸಿದೆ. ಅದರಲ್ಲೂ ಉಡುಪಿ, ಮಂಗಳೂರಿನಲ್ಲಿ ಪ್ರತಿಷ್ಠಿತ ವಿದ್ಯಾಲ ಯಗಳೇ ಗಾಂಜಾ ಅಡ್ಡೆಯಾಗಿವೆ. ಸಮಾಜವನ್ನು ಮುನ್ನಡೆಸಬೇಕಿರುವ ಯುವ ಪೀಳಿಗೆ ಈ ನಶೆಗೆ ದಾಸರಾ ಗುತ್ತಿದ್ದಾರೆ. ಡಾಕ್ಟರ್, ಲಾಯರ್?ಗಳು ತಾವು ಇರುವಲ್ಲಿಯೇ ಯಾರಿಗೂ ತಿಳಿಯದಂತೆ ಗಾಂಜಾ ಬೆಳೆಯುವುದು, ಮಾರಾಟ ಮಾಡುವುದರಲ್ಲಿ ತೊಡಗಿಕೊಳ್ಳುತ್ತಿದ್ದಾರೆ. ಕೊರೊನಾ ಸಂದರ್ಭದಲ್ಲಿ ಗಾಂಜಾ ಮುಕ್ತ ರಾಜ್ಯ ಮಾಡ ಲು ಸರ್ಕಾರ ಅನೇಕ ಕ್ರಮಗಳನ್ನು ಕೈಗೊಂಡಿತ್ತು. ಆದ್ರೆ ಯಾವುದೇ ಫಲ ಕಂಡು ಬಂದಿಲ್ಲ. ಸದ್ಯ ಈಗ ಶಾಲಾ ಪಠ್ಯ ಪುಸ್ತಕದಲ್ಲಿ ಡ್ರಗ್ಸ್(Drugs) ವಿರುದ್ಧ ಜಾಗೃತಿ ಮೂಡಿಸುವ ಪಾಠ ಸೇರಿಸಲು ಕಾಂಗ್ರೆಸ್ ಸರ್ಕಾರಕ್ಕೆ ಮನವಿ ಮಾಡಲು ಬೆಂಗಳೂರು ಪೊಲೀಸ್ ಕಮಿಷನರ್ ಚಿಂತನೆ ನಡೆಸಿದ್ದಾರೆ.



ನಗರ ಪೊಲೀಸ್ ಆಯುಕ್ತ ದಯಾನಂದ್ ಈ ಬಗ್ಗೆ ಚಿಂತನೆ ನಡೆಸಿದ್ದು ಶಾಲಾ ಮಕ್ಕಳಲ್ಲಿ ಡ್ರಗ್ ಬಗ್ಗೆ ಜಾಗೃತಿ ಮೂಡಿಸುವ ತಂತ್ರಕ್ಕೆ ಮುಂದಾಗಿದ್ದಾರೆ. ಡ್ರಗ್ಸ್ ಸೇವನೆ, ಅದರಿಂದಾಗುವ ದುಷ್ಪರಿಣಾಮ ಹಾಗೂ ಆರೋಗ್ಯದಲ್ಲಾಗುವ ನಷ್ಟ, ಡ್ರಗ್ಸ್‌ನಿಂದ ಆಗುವ ಅನಾಹುತಗಳ ಬಗ್ಗೆ ಶಿಕ್ಷಕರಿಂ ದಲೇ ಮಕ್ಕಳಿಗೆ ಅರಿವು ಮೂಡಿ ಸುವ ಪ್ರಯತ್ನದ ಬಗ್ಗೆ ಚಿಂತನೆ ನಡೆಸಲಾ ಗುತ್ತಿದೆ. ಪಠ್ಯದಲ್ಲಿ ಡ್ರಗ್ಸ್ ವಿರುದ್ಧ ಜಾಗೃತಿ ಸೇರಿಸಲು ಸರ್ಕಾರಕ್ಕೆ ಮನವಿ ಸಲ್ಲಿಸಲು ಚಿಂತನೆ ನಡೆಸಿದ್ದಾರೆ.

ರಾಜ್ಯ ಡಿಜಿ ಸಹ ಡ್ರಗ್ಸ್ ಕಂಟ್ರೋಲ್‌ಗೆ ಮಹತ್ವ ನೀಡಿದ್ದಾರೆ. ಮತ್ತೊಂದೆಡೆ ಪೊಲೀಸರು ಡ್ರಗ್ಸ್ ಸಂಬಂಧ ಹಲವು ಕಾರ್ಯಾಚರಣೆ ನಡೆಸುತ್ತಿದ್ದು ಯುವ ಕರು ಹೆಚ್ಚಾಗಿ ಮಾದಕ ಲೋಕಕ್ಕೆ ಟಾರ್ಗೆ ಟ್ ಆಗುತ್ತಿದ್ದಾರೆ ಎಂಬ ಬಗ್ಗೆ ಮಾಹಿತಿ ಪತ್ತೆಯಾಗಿದೆ. ಯುವಜನತೆ ಹೆಚ್ಚು ಮಾ ದಕ ವ್ಯಸನಿಗಳಾಗುತಿದ್ದಾರೆ. ಕಾಲೇಜು ಹಂತದಲ್ಲಿರುವ ಮಕ್ಕಳೇ ಹೆಚ್ಚು ಮಾದಕ ದುಷ್ಚಟಕ್ಕೆ ಬಲಿಯಾಗುತಿದ್ದಾರೆ.

ಹೀಗಾಗಿ ಶಾಲಾ ಹಂತದಲ್ಲೇ ಮಕ್ಕಳಿಗೆ ಮಾದಕ ವಸ್ತುಗಳ ವಿರುದ್ಧ ಜಾಗೃತಿ ಮೂಡಿಸುವ ಪ್ರಯತ್ನಕ್ಕೆ ಮುಂದಾಗಿದ್ದು ಪ್ರಯತ್ನದ ಹಂತವಾಗಿ ಬೆಂಗಳೂರು ಪೊಲೀಸ್ ಕಮಿಷನರ್, ಸರ್ಕಾರಕ್ಕೆ ಈ ಬಗ್ಗೆ ಮನವಿ ಮಾಡಲಿದ್ದಾರೆ.

## ಗ್ಯಾರಂಟಿ ಖುಷಿ ನಡುವೆ ರಾಜ್ಯದ ಜನರಿಗೆ ಬೆಲೆ ಏರಿಕೆ ಬರೆ; ಶತಕದ ಹೊಸ್ತಿಲಲ್ಲಿ ಕೆಜಿ ಟೊಮ್ಯಾಟೊ



### ಬೆಲೆ ಏರಿಕೆಯಾಗಿರುವ ದಿನಸಿಗಳ ವಿವರ

**ಅಕ್ಕಿ: ಹಿಂದಿನ ದರ 40 ರೂ. ಈಗ 50 ರೂ**
**ತೂರ್ ದಾಲ್: ಹಿಂದಿನ ದರ 96 ರೂ. ಈಗ 115 ರೂ**
**ಉದ್ದಿನಬೇಳೆ: ಹಿಂದಿನ ದರ 95 ರೂ. ಈಗ 128 ರೂ**
**ಮಸೂರ್‌ದಾಲ್: ಹಿಂದಿನ ದರ 74 ರೂ. ಈಗ 85 ರೂ**
**ಹೆಸರು ಬೇಳೆ: ಹಿಂದಿನ ದರ 95 ರೂ. ಈಗ 105 ರೂ**
**ಜೀರಾ: ಹಿಂದಿನ ದರ 350 ರೂ. ಇಂದಿನ ದರ 750 ರೂ**
**ಅರಿಶಿಣ ಪುಡಿ: ಹಿಂದಿನ ದರ 126 ರೂ. ಇಂದಿನ ದರ 307 ರೂ.**
**ಚಿಲ್ಲಿ ಪೌಡರ್: ಹಿಂದಿನ ದರ 186 ರೂ. ಈಗ 425 ರೂ**
**ದನಿಯಾ ಪೌಡರ್: ಹಿಂದಿನ ದರ 150 ರೂ. ಈಗ 218 ರೂ**
**ಪೆಪ್ಪರ್: ಹಿಂದಿನ ದರ 380 ರೂ, ಈಗ 520 ರೂ**
**ಬ್ಯಾಡಗಿ ಮೆಣಸು: ಹಿಂದಿನ ದರ 330 ರೂ, ಈಗ 850 ರೂ ಇದೆ.**

**ಬೆಂಗಳೂರು:** ಕಾಂಗ್ರೆಸ್ ಸರ್ಕಾರದ ಐದು ಗ್ಯಾರಂಟಿಗಳ(Congress Guarantee) ಖುಷಿ ನಡುವೆ ದಿನೇ ದಿನೇ ಒಂದಲ್ಲಾ ಒಂದು ಬೆಲೆ ಏರಿಕೆ ಜನರನ್ನು ಕಂಗಾಲಾಗಿಸಿದೆ. ಇದರ ಜೊತೆಗೆ ಟೊಮ್ಯಾಟೊ ದರ(Tomato Rate Hike) ಗಗನಕ್ಕೇರಿದ್ದು ಜನ ಮತ್ತೊಮ್ಮೆ ಶಾಕ್ ಆಗಿದ್ದಾರೆ. ಟೊಮ್ಯಾಟೊ ದರ ನೂರು ರೂಪಾಯಿ ಸನಿಹಕ್ಕೆ ಬಂದಿದ್ದು, 15 ಏರ ಟೊಮ್ಯಾಟೊ ಬಾಕ್ಸ್ ಸಾವಿರ ರೂ ಇದೆ. ಇನ್ನೆರಡು ದಿನದಲ್ಲಿ ಟೊಮ್ಯಾಟೊ ದರ ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ.

ಕಳೆದ ವಾರ 20-30 ರೂಪಾಯಿ ಇದ್ದ ಟೊಮ್ಯಾಟೊ ದರ, ಈಗ ಏಕಾಏಕಿ 80 ರೂಪಾಯಿ ಆಗಿದೆ. ಮಲ್ಲೇಶ್ವರಂ, ಜಯನಗರ, ರಾಜಾಜಿನಗರ ಇತರೆ ಕಡೆಗಳಲ್ಲಿ 90-100 ರೂಪಾಯಿ ದರದಲ್ಲಿ ಟೊಮ್ಯಾಟೊ ಮಾರಾಟ ಮಾಡಲಾಗುತ್ತಿದೆ. ಇದೇ ಮೊದಲ ಬಾರಿಗೆ ರಾಜ್ಯದ ಟೊಮ್ಯಾಟೊ ಬಾಂಗ್ಲಾಕ್ಕೆ ರಫ್ತು ಮಾಡಲಾಗುತ್ತಿದೆ. ಕೋಲಾರದಿಂದ ಹೊರರಾಜ್ಯಗಳಿಗೆ ರಫ್ತು ಹೆಚ್ಚಾಗುತ್ತಿದ್ದು, ಬೇರೆ ರಾಜ್ಯಗಳಲ್ಲಿ ಟೊಮ್ಯಾಟೊಗೆ ಭಾರೀ ಡಿಮ್ಯಾಂಡ್ ಇದೆ. ಇದರಿಂದಾಗಿ ರಾಜಧಾನಿ ಬೆಂಗಳೂರಿಗೆ ಬೆಲೆ ಬಿಸಿ ತಟ್ಟಿದೆ. ಟೊಮ್ಯಾಟೊ ಖರೀದಿ ಮಾಡಲು ಜನರು ಹಿಂದೇಟು ಹಾಕುವಂತಾಗಿದೆ.

ಈ ನಡುವೆ ದಿನಸಿ ಪದಾರ್ಥಗಳ ಬೆಲೆಯು ಕೂಡ ಏರಿಕೆಯಾಗಿದೆ. ಸುಮಾರು 11 ದಿನಸಿ ಪದಾರ್ಥಗಳ ಬೆಲೆ ಏರಿಕೆ ಮಾಡಲಾಗಿದೆ.

# ಸಿಎಂ ಭೇಟಿಯಾದ ಅಶೋಕ್ ಚೌಹಾಣ್ ಅಭಿನಂದನೆ, ಮಹಾರಾಷ್ಟ್ರ ಚುನಾವಣೆ ಕುರಿತು ಚರ್ಚೆ



**ಬೆಂಗಳೂರು:** ಮಹಾರಾಷ್ಟ್ರ ರಾಜ್ಯದ ಮಾಜಿ ಮುಖ್ಯಮಂತ್ರಿ ಅಶೋಕ್ ಚೌಹಾಣ್ ಅವರು ಇಂದು ಗೃಹ ಕಚೇರಿ ಕೃಷ್ಣಾದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಅಭಿನಂದಿಸಿದ್ದಾರೆ. ರಾಜ್ಯದಲ್ಲಿ ನೂತನವಾಗಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಿರುವ ಸಂದರ್ಭದಲ್ಲಿ ರಾಜ್ಯ ಕಾಂಗ್ರೆಸ್ ನಾಯಕರನ್ನು ಭೇಟಿಯಾಗಿ ಅಭಿನಂದನೆ ಸಲ್ಲಿಸುವ ಕಾರ್ಯವನ್ನು ಹಲವು ರಾಜ್ಯದ ಕಾಂಗ್ರೆಸ್ ನಾಯಕರು ಮಾಡುತ್ತಿದ್ದಾರೆ. ನಿನ್ನೆಯೇ ಬೆಂಗಳೂರಿಗೆ ಅಗಮಿಸಿರುವ ಚೌಹಾಣ್ ಇಂದು ಸಿದ್ದರಾಮಯ್ಯ ಅವರನ್ನು ಭೇಟಿಯಾಗಿದ್ದಾರೆ.ನಿನ್ನೆ ಸಂಜೆ ಅವರು ಡಿಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾಗಿ ಅಭಿನಂದಿಸಿದ್ದರು. ನಿನ್ನೆ ಸಂಜೆ ಅಶೋಕ್ ಚೌಹಾಣ್ ಅವರು ಡಿಸಿಎಂ ಡಿ ಕೆ ಶಿವಕುಮಾರ್ ಅವರನ್ನು ಸದಾಶಿವನಗರ ನಿವಾಸದಲ್ಲಿ ಭೇಟಿ ಮಾಡಿ ಅಭಿನಂದನೆ ಸಲ್ಲಿಸಿದ್ದರು. ಈ ಸಂದರ್ಭ ಮಹಾರಾಷ್ಟ್ರದಲ್ಲಿ ಮುಂಬರುವ ದಿನಗಳಲ್ಲಿ ನಡೆಯುವ ಚುನಾವಣೆ ಹಾಗೂ ಪಕ್ಷದ ಬಲದ ಕುರಿತು ಸುದೀರ್ಘ ಚರ್ಚೆ ನಡೆಸಿದರು. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಿರುವ ಹಿಂದೆ ಇರುವ ರಾಜ್ಯ ನಾಯಕರ ಪ್ರಯತ್ನ, ಹೋರಾಟ ಹಾಗೂ ರಾಜ್ಯದಲ್ಲಿ ಅಧಿಕಾರದಲ್ಲಿದ್ದ ಬಿಜೆಪಿ ಸರ್ಕಾರದ ಜನವಿರೋಧಿ ಅಲೆಯನ್ನು ಬಳಸಿಕೊಂಡ ವಿಧಾನದ ಕುರಿತು ಚರ್ಚಿಸಿದ್ದರು.ಇಂದಿನ ಭೇಟಿ ಸಂದರ್ಭದಲ್ಲಿಯೂ ಚೌಹಾಣ್ ಹಾಗೂ ಸಿದ್ದರಾಮಯ್ಯ ಸುದೀರ್ಘ ಸಮಾಲೋಚನೆ ನಡೆಸಿದ್ದಾರೆ. ಕರ್ನಾಟಕದಲ್ಲಿ ಎರಡನೇ ಬಾರಿಗೆ ಸಿಎಂ ಆಗಿ ಸಿದ್ದರಾಮಯ್ಯ ಅಧಿಕಾರ ವಹಿಸಿಕೊಂಡಿದ್ದಾರೆ. ಹಣಕಾಸು ಸಚಿವರೂ ಆಗಿರುವ ಅವರು ಸದ್ಯ ಬಜೆಟ್ ಮಂಡಿಸುವ ಸಿದ್ಧತೆಯಲ್ಲಿದ್ದಾರೆ. ಆರ್ಥಿಕ ಸಚಿವರಾಗಿ 14ನೇ ಬಜೆಟ್ ಮಂಡನೆಗೆ ಸಜ್ಜಾಗುತ್ತಿರುವ ಸಿದ್ದರಾಮಯ್ಯ ಜತೆ ಚೌಹಾಣ್ ರಾಜ್ಯ ಕಾಂಗ್ರೆಸ್ ಸರ್ಕಾರದ ಐದು ಭಾಗ್ಯಗಳಿಗೆ ಹಣ ಹೊಂದಿಸುವ ಜತೆ ಇತರೆ ಘೋಷಣೆಯನ್ನೂ ಈಡೇರಿಸಲು ಕೈಗೊಂಡಿರುವ ಕಾರ್ಯತಂತ್ರ ಕುರಿತು ಚರ್ಚಿಸಿದರು. ಮುಂಬರುವ ದಿನಗಳಲ್ಲಿ ಕಾಂಗ್ರೆಸ್ ಪಕ್ಷ ಮಹಾರಾಷ್ಟ್ರ ಚುನಾವಣೆಯಲ್ಲೂ ಇಂತಹ ಪ್ರಯತ್ನಕ್ಕೆ ಕೈ ಹಾಕುವ ಸಾಧ್ಯತೆ ಇದ್ದು, ಈ ನಿಟ್ಟಿನಲ್ಲಿ ಸಾಧಕ, ಬಾಧಕಗಳ ಕುರಿತು ಉಭಯ ನಾಯಕರು ಚರ್ಚಿಸಿದ್ದಾರೆ.ಸಿಎಂ ಭೇಟಿಯಾದ ಅಶೋಕ್ ಚೌಹಾಣ್ಚುನಾವಣೆ ಮುನ್ನವೇ ಹೇಳಿದ್ದರು: ರಾಜ್ಯ ವಿಧಾನಸಭೆ ಚುನಾವಣೆಗೆ ಮುನ್ನವೇ ಕರ್ನಾಟಕಕ್ಕೆ ಆಗಮಿಸಿ ಬೆಳಗಾವಿಯಲ್ಲಿ ಪಕ್ಷದ ಪರ ಮಾಧ್ಯಮಗೋಷ್ಠಿ ನಡೆಸಿದ್ದ ಅಶೋಕ್ ಚೌಹಾಣ್, ರಾಜ್ಯದಲ್ಲಿ ಕಾಂಗ್ರೆಸ್ ಪರ ಸುನಾಮಿ ಎದ್ದಿದೆ. ಈ ಬಾರಿ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುವುದು ನಿಶ್ಚಿತ. ಕಾಂಗ್ರೆಸ್ ಈ ಬಾರಿ ಐದು ಪ್ರಮುಖ ಯೋಜನೆಗಳನ್ನು ತನ್ನ ಪ್ರಣಾಳಿಕೆಯಲ್ಲಿ ನೀಡಿದೆ. ಉಚಿತ ವಿದ್ಯುತ್, ಗೃಹ ಲಕ್ಷ್ಮೀ, ಅನ್ನಭಾಗ್ಯ, ನಿರುದ್ಯೋಗಿ ಯುವಕರಿಗೆ ಭತ್ಯೆ ಸೇರಿದಂತೆ ಸಾಕಷ್ಟು ಯೋಜನೆಯನ್ನು ಘೋಷಣೆ ಮಾಡಿದೆ. ಇದನ್ನು ಇಂತಿಷ್ಟು ಕಾಲದಲ್ಲಿ ಪೂರ್ಣಗೊಳಿಸುವ ಬಗ್ಗೆ ಕಾಂಗ್ರೆಸ್ ಭರವಸೆ ನೀಡಿದ್ದು, ಜನರು ಕಾಂಗ್ರೆಸ್ ಮೇಲೆ ವಿಶ್ವಾಸ ಇರಿಸಿದ್ದಾರೆ. ಆದರೆ ಬಿಜೆಪಿ ಇದರ ವಿರುದ್ಧವಾಗಿ ನಡೆಯುತ್ತಿದೆ. ರಾಜ್ಯದಲ್ಲಿ ಕಾಂಗ್ರೆಸ್ ಪರವಾದ ಸುನಾಮಿ ಎದ್ದಿದೆ ಎಂದು ಹೇಳಿದ್ದರು. ಅದೇ ರೀತಿ ನಿರೀಕ್ಷೆಗೂ ಮೀರಿದ 135 ಸ್ಥಾನಗಳೊಂದಿಗೆ ಕಾಂಗ್ರೆಸ್ ಭರ್ಜರಿ ಗೆಲುವು ಸಾಧಿಸಿರುವ ಹಿನ್ನೆಲೆ ರಾಜ್ಯಕ್ಕೆ ಭೇಟಿ ನೀಡಿ ಇಲ್ಲಿನ ಕಾಂಗ್ರೆಸ್ ನಾಯಕರನ್ನು ಅಭಿನಂದಿಸಿದ್ದಾರೆ.

# ಕಾಂಗ್ರೆಸ್‌ನಿಂದ ಮಾತ್ರ ದೇಶದ ಪ್ರಗತಿ ಸಾಧ್ಯ: ಸಿಎಂ ಸಿದ್ದರಾಮಯ್ಯ



**ಬೆಂಗಳೂರು:** ಭಾರತದ ದೀನದಲಿತರ ಹಾಗೂ ಬಡವರ ಏಳಿಗೆಗಾಗಿ, ಭ್ರಷ್ಟಾಚಾರ ನಿಗ್ರಹಕ್ಕಾಗಿ ಹಾಗೂ ದೇಶವನ್ನು ಅಭಿವೃದ್ಧಿಯ ಪಥದಲ್ಲಿ ನಡೆಸುವ ಸಲುವಾಗಿ ಭಾರತದಲ್ಲಿ ಬಿಜೆಪಿಯೇತರ ಸರ್ಕಾರ ಅಧಿಕಾರಕ್ಕೆ ಬರಲೇಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾನುವಾರ ಹೇಳಿದರು.

ಎಂದು ಮಹಾರಾಷ್ಟ್ರದ ಸಾಂಗ್ಲಿಯಲ್ಲಿ ಭಾನುವಾರ ನಡೆದ ಕಾಂಗ್ರೆಸ್ ಮಹಾ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಬರುವ ಲೋಕಸಭೆಯಲ್ಲಿ ಎಲ್ಲರೂ ಒಗ್ಗಟ್ಟಾಗಿ ಸ್ವಾತಂತ್ರ್ಯ ಹೋರಾಟದಲ್ಲಿ ಹೋರಾಡಿದಂತೆ, ಬಿಜೆಪಿಯನ್ನು ಹೋಗಲಾಡಿಸಲು ಹೋರಾಡ ಬೇಕು. ಕಾಂಗ್ರೆಸ್ ಪಕ್ಷವನ್ನು ಲೋಕಸಭಾ ಚುನಾವಣೆಯಲ್ಲಿ ಗೆಲ್ಲಿಸಲು ಕಾರ್ಯಕರ್ತರು ಹೋರಾಡಬೇಕು ಎಂದು ಕರೆ ನೀಡಿದರು.

ಮುಂದಿನ ವರ್ಷ ನಡೆಯಲಿರುವ ಲೋಕಸಭೆ ಚುನಾವಣೆಯಲ್ಲಿ ಪಕ್ಷದ ಕಾರ್ಯಕರ್ತರು ಒಗ್ಗಟ್ಟಿನಿಂದ ಕೆಲಸ ಮಾಡಿ, ಬಿಜೆಪಿಯ ಸೋಲುವಂತೆ ಮಾಡಬೇಕು. ಕೇಂದ್ರದಲ್ಲಿ ಬಿಜೆಪಿಯೇತರ ಸರಕಾರ ಮಾತ್ರವೇ ದೀನದಲಿತರನ್ನು ಮೇಲಕ್ಕೆತ್ತಲು, ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಿ ದೇಶವನ್ನು ಅಭಿವೃದ್ಧಿ ಪಥದತ್ತ ಕೊಂಡೊಯ್ಯಲು ಸಾಧ್ಯ. ಬಿಜೆಪಿಯನ್ನು ಅಧಿಕಾರದಿಂದ ಕಿತ್ತೊಗೆಯಲು ಮುಂದಿನ ಲೋಕಸಭೆ ಚುನಾವಣೆಯಲ್ಲಿ ಸ್ವಾತಂತ್ರ್ಯ ಹೋರಾಟದ ರೀತಿಯ ಚಳವಳಿ ನಡೆಸಬೇಕಿದೆ ಎಂದು ಹೇಳಿದರು.ಇದೇ ವೇಳೆ ಅಚ್ಛೇ ದಿನ್ ಘೋಷಣೆಯನ್ನು ಲೇವಡಿ ಮಾಡಿ ದ ಸಿದ್ದರಾಮಯ್ಯ, ಪ್ರಧಾನಿ ಮೋದಿ ಅವರು ಕಪ್ಪುಹಣವನ್ನು ವಾಪಸ್ ಪಡೆದು ಪ್ರತಿಯೊಬ್ಬ ನಾಗರಿಕನ ಖಾತೆಗೆ 15 ಲಕ್ಷ ರೂ. ಜಮಾ ಮಾಡುವುದಾಗಿ ಭರವಸೆ ನೀಡಿದ್ದರು. 9 ವರ್ಷಗಳಲ್ಲಿ 18 ಕೋಟಿ ಜನರು ಉದ್ಯೋಗಗಳನ್ನು ಕಳೆದುಕೊಳ್ಳುತ್ತಿದ್ದಾರೆ. ಇಂಧನ, ಸಿಮೆಂಟ್ ಮತ್ತು ಆಹಾರ ಪದಾರ್ಥಗಳ ಬೆಲೆ ಗಗನಕ್ಕೇರಿದೆ. ಭ್ರಷ್ಟಾಚಾರವನ್ನು ಸಹಿಸುವುದಿಲ್ಲ ಎಂದು ಮೋದಿ ಹೇಳುತ್ತಿದ್ದಾರೆ, ಆದರೆ, ಹಿಂದಿನ ಬಿಜೆಪಿ ಸರ್ಕಾರವು ಶೇ.40 ಕಮಿಷನ್ ದಂಧೆಯಲ್ಲಿ ಮುಳುಗಿದೆ ಕಿಡಿಕಾರಿ ದರು.ಬಡವರು, ಅಲ್ಪಸಂಖ್ಯಾತರು ಭಯದಲ್ಲಿ ಜೀವನ ಸಾಗಿಸುತ್ತಿ ದ್ದಾರೆ. ಹೀಗಾಗಿ ಕೇಂದ್ರ ಹಾಗೂ ಮಹಾರಾಷ್ಟ್ರದಲ್ಲಿ ಬಿಜೆಪಿ ಸರ್ಕಾರವನ್ನು ತೊಡೆದುಹಾ ಕುವುದು ಕಾಂಗ್ರೆಸ್ ಪಕ್ಷದ ಜವಾ ಬ್ದಾರಿಯಾಗಿದೆ ಎಂದು ಹೇಳಿದರು.

# ಖಾತರಿಗಳ ಜಾರಿಗೆ ಆಗ್ರಹ: ಬಿಎಸ್ ಯಡಿಯೂರಪ್ಪ ನೇತೃತ್ವದಲ್ಲಿ ಜುಲೈ 4 ರಿಂದ ಬಿಜೆಪಿ ಪ್ರತಿಭಟನೆ



**ಬೆಂಗಳೂರು:** ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ತನ್ನ ಚುನಾವಣಾ ಭರವಸೆಗಳನ್ನು ಜಾರಿಗೆ ತರುವಂತೆ ಒತ್ತಾಯಿಸಿ ವಿಧಾನಸೌಧದ ಅಧಿವೇಶನದ ವೇಳೆ ವಿಧಾನ ಸಭೆಯ ಒಳಗೆ ಮತ್ತು ಹೊರಗೆ ಬಿಜೆಪಿ ಪ್ರತಿಭಟನೆ ನಡೆಸಲಿದೆ ಎಂದು ಘೋಷಿಸಿದ ಪಕ್ಷದ ಹಿರಿಯ ನಾಯಕ ಬಿಎಸ್ ಯಡಿಯೂರಪ್ಪ ಅವರು ಜುಲೈ 4 ರಿಂದ ವಿಧಾನಸೌಧದ ಗಾಂಧಿ ಪ್ರತಿಮೆ ಎದುರು ಧರಣಿ ನಡೆಸಲಿದ್ದಾರೆ.

2024ರ ಲೋಕಸಭೆ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಚುನಾವಣೆಗೆ ಸಿದ್ಧರಾಗಿ ಮತ್ತು ಬಿಜೆಪಿ ಗೆಲ್ಲುವುದನ್ನು ಖಚಿತಪಡಿಸಿಕೊಳ್ಳಲು ಪಕ್ಷದ ಕಾರ್ಯಕರ್ತರು ಮತ್ತು ಮುಖಂಡರಿಗೆ ಮಾಜಿ ಮುಖ್ಯಮಂತ್ರಿ ಕರೆ ನೀಡಿದರು.

'ಕರ್ನಾಟಕ ಚುನಾವಣೆಯಲ್ಲಿ ಜನರು ತಮ್ಮ (ಕಾಂಗ್ರೆಸ್) ಗ್ಯಾರಂಟಿ ಕಾರ್ಡ್ ಅನ್ನು ನಂಬಿ ದ್ದರು. ಅವರು ಮೋಸ ಹೋಗಿದ್ದಾರೆ. ಅದರ ಪರಿಣಾಮವಾಗಿ ನಾವು (ಬಿಜೆಪಿ) 100ಕ್ಕೂ ಹೆಚ್ಚು ಸ್ಥಾನಗಳಲ್ಲಿ ಗೆಲ್ಲಲು ಸಾಧ್ಯವಾ ಗಲಿಲ್ಲ' ಎಂದರು.

ಈ ಸರ್ಕಾರದ ರೈತ ಮತ್ತು ಜನವಿರೋಧಿ ನೀತಿಗಳ ವಿರುದ್ಧ ವಿಧಾನಸಭೆಯ ಒಳಗೆ ಮತ್ತು ಹೊರಗೆ ಪ್ರತಿಭಟಿಸುತ್ತೇವೆ ಮತ್ತು ಕಾಂಗ್ರೆಸ್ ಭರವಸೆ ನೀಡಿದಂತೆ 24 ಗಂಟೆಗಳಲ್ಲಿ ಐದು ಭರವಸೆಗಳನ್ನು ಅನುಷ್ಠಾನಗೊಳಿಸುವಲ್ಲಿ ವಿಫಲವಾಗಿದೆ ಎಂದು ಯಡಿಯೂರಪ್ಪ ಹೇಳಿದರು.

ಇಲ್ಲಿ ನಡೆದ ಪಕ್ಷದ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಸರ್ಕಾರವು ಇಲ್ಲಿಯ ವರೆಗೆ ಸಾರ್ವಜನಿಕ ಸಾರಿಗೆ ಬಸ್‌ಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣದ ಒಂದೇ ಒಂದು ಖಾತ್ರಿಯನ್ನು ಜಾರಿಗೆ ತಂದಿದೆ, ಸಾಕಷ್ಟು ಷರತ್ತುಗಳನ್ನು ವಿಧಿಸಿದೆ, ಇದು ಮಹಿಳಾ ಜಾನಪದಕ್ಕೆ ಅವಮಾನವಾಗಿದೆ ಎಂದು ದೂರಿದರು

# ಬೆಂಗಳೂರಲ್ಲಿ ಕಳೆದ ಒಂದು ವರ್ಷದಲ್ಲಿ 57 ಕೋಟಿ ರೂ. ಮೌಲ್ಯದ ಮಾದಕ ದ್ರವ್ಯ ವಶ



**ಬೆಂಗಳೂರು:** (ಜೂ.26) ವಿಶ್ವ ಮಾದಕ ವಸ್ತು ವಿರೋಧಿ ದಿನ (International day against drug abuse) ಇತ್ತೀಚಿನ ವರ್ಷಗಳಲ್ಲಿ ಯುವಕರು ಮಾದಕ ದ್ರವ್ಯ (ಆಡಿಣಾಂ) ವ್ಯಸನಿಗಳಾಗುತ್ತಿದ್ದಾರೆ. ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ ಬೆಂಗಳೂರು ನಗರ ಪೊಲೀಸರು ಶಿಸ್ತು ಕ್ರಮಗಳನ್ನು ಕೈಗೊಂಡಿದ್ದಾರೆ. ಬೆಂಗಳೂರು ಪೊಲೀಸರು ಕಳೆದ ಒಂದು ವರ್ಷದಲ್ಲಿ 1,933 ಪ್ರಕರಣಗಳು ದಾಖಲಿಸಿ 57 ಕೋಟಿ ರೂ. ಮೌಲ್ಯದ ಮಾದಕ ದ್ರವ್ಯವನ್ನು ವಶಪಡಿಸಿಕೊಂಡಿದ್ದಾರೆ.

ಹೀಗೆ ವಶಪಡಿಸಿಕೊಂಡ ಮಾದಕ ವಸ್ತುಗಳಲ್ಲಿ 3746 ಕೆಜಿ ಗಾಂಜಾ, 167 ಕೆಜಿ ಇತರೆ ಡ್ರಗ್ಸ್, ಸಿಂಥೆಟಿಕ್ ಕೂಡ ಇದೆ. ಆರೋಪಿಗಳು ಅಂತರಾಜ್ಯ ಮತ್ತು ವಿದೇಶಗಳಿಂದ ಬೆಂಗಳೂರಿಗೆ ಡ್ರಗ್ಸ್ ತಂದು ಮಾರಾಟ ಮಾಡುತ್ತಿದ್ದರು. ಆಂಧ್ರಪ್ರದೇಶ, ಒಡಿಶಾ, ತಮಿಳುನಾಡು, ಗೋವಾ, ಆಫ್ರಿಕಾ ಹಾಗೂ ಡಾರ್ಕ್ ವೆಬ್?ನಿಂದ ಬರುವ ಜನರು ನಗರದಲ್ಲಿ ಡ್ರಗ್ಸ್ ಮಾರುತ್ತಿದ್ದರು.

ಇವರು ಯುವತಿಯರು, ಟೆಕ್ಕಿಗಳು, ವಿದ್ಯಾರ್ಥಿಗಳನ್ನೇ ಟಾರ್ಗೆಟ್ ಮಾಡುತ್ತಿದ್ದರು. ಇಂದು ಮಾದಕವಸ್ತು ಮಾರಾಟ & ಸೇವನೆ ವಿರೋಧಿ ದಿನ ಹಿನ್ನೆಲೆ ವಶಪಡಿಸಿಕೊಂಡ ಮಾದಕವಸ್ತುಗಳನ್ನು ಪೊಲೀಸರು ದಾಬಸ್ ಪೇಟೆಯ ಕೈಗಾರಿಕಾ ಪ್ರದೇಶದಲ್ಲಿ ನಾಶಪಡಿಸಿದ್ದಾರೆ.

ಕಳೆದ ಕೆಲವು ತಿಂಗಳಿನಿಂದ ಬೆಂಗಳೂರು ಪೊಲೀಸರು ಮಾದಕ ವ್ಯಸನಿ ಹಾಗೂ ಮಾರಾಟಗಾರರ ವಿರುದ್ಧ ಸಮರ ಸಾರಿದ್ದು, ಅನೇಕರನ್ನು ಬಂಧಿಸಿದ್ದಾರೆ. ಇತ್ತೀಚೆಗೆ ನಗರದ ಬಾರ್ ಹಾಗೂ ಪಬ್‌ಗಳ ಮೇಲೆ ದಾಳಿ ಮಾಡಿ ಮಾದಕ ವ್ಯಸನಿಗಳಾಗಿದ್ದ ಹಲವರನ್ನು ವಶಕ್ಕೆ ಪಡೆದುಕೊಂಡಿದ್ದರು. ಅಲ್ಲದೇ ಮಾದಕವಸ್ತು ಮಾರಾಟ ಮತ್ತು ಸೇವನೆಯಲ್ಲಿ ತೊಡಗಿದ್ದ ಅನೇಕ ವಿದೇಶಿಯರನ್ನು ಗಡೀಪಾರು ಮಾಡಿದ್ದಾರೆ.

ಮೇ ಕೊನೆಯ ವಾರದಲ್ಲಿ ಅಧಿಕಾರ ವಹಿಸಿಕೊಂಡ ಕರ್ನಾಟಕದ ಪೊಲೀಸ್ ಮಹಾನಿರ್ದೇಶಕ (ಡಿಜಿಪಿ) ಅಲೋಕ್ ಮೋಹನ್ ಅವರು ಮುಂದಿನ ವರ್ಷಗಳಲ್ಲಿ ಬೆಂಗಳೂರನ್ನು ಮಾದಕ ದ್ರವ್ಯ ಮುಕ್ತ ನಗರವನ್ನಾಗಿ ಮಾಡಲು ಇಲಾಖೆಗೆ ನಿರ್ದೇಶನ ನೀಡಿದರು.

ನಂತರ ಮಾತನಾಡಿದ ಅವರು, ಇಂದು ಎಲ್ಲ ಹಿರಿಯ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಬೆಂಗಳೂರಿನಲ್ಲಿ ಡ್ರಗ್ಸ್ ಹಾವಳಿ ಮತ್ತು ಅದನ್ನು ನಿಭಾಯಿಸುವ ಬಗ್ಗೆ ಚರ್ಚಿಸಿದ್ದೇವೆ. ಬೆಂಗಳೂರು ಶೀಘ್ರದಲ್ಲೇ ಮಾದಕ ದ್ರವ್ಯ ಮುಕ್ತ ನಗರವಾಗಲಿದ್ದು, ಅದಕ್ಕಾಗಿ ಕೆಲಸ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ. ನಾವು ಯೋಜನೆಯನ್ನು ಹೊಂದಿದ್ದೇವೆ ಮತ್ತು ಮುಂಬರುವ ತಿಂಗಳುಗಳಲ್ಲಿ ನಾವು ಎಲ್ಲಾ ಪೆಡ್ಲರ್‌ಗಳನ್ನು ವಶಪಡಿಸಿಕೊಳ್ಳುತ್ತೇವೆ ಎಂದರು.

## ಕಿಟಕಿಯಿಂದ ಬಸ್ ಹತ್ತುವಾಗ ಮಹಿಳೆಯ ಕೈ ಕಟ್ ಆಯಿತೇ?: ವೈರಲ್ ವಿಡಿಯೋದ ಸತ್ಯಾಸತ್ಯತೆ



**ಬೆಂಗಳೂರು/ಮಂಡ್ಯ:** ರಾಜ್ಯಾದ್ಯಂತ ಮಹಿಳೆಯರಿಗೆ ಶಕ್ತಿ ಯೋಜನೆ ಜಾರಿಯಾಗಿದ್ದು, ಬಸ್‌ಗಾಗಿ ಪ್ರಯಾಣಿಕರು ಹಾಗೂ ಕಂಡಕ್ಟರ್ ಗಲಾಟೆ, ಮಾತಿನ ಚಕಮಕಿಯಾಗುತ್ತಿರುವ ವಿಡಿಯೋಗಳು ವೈರಲ್ ಆಗುತ್ತಿವೆ. ಅದರಂತೆ ಕಿಟಕಿ ಮೂಲಕ ಕೆಎಸ್‌ಆರ್ ಟಿಸಿ ಬಸ್ ಹತ್ತಲು ಯತ್ನಿಸುತ್ತಿದ್ದ ವೇಳೆ ಮಹಿಳೆಯೊಬ್ಬರ ಕೈ ಕಟ್ ಆಗಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ(ಖಂಛಿಚಿಟ ಒಜಜುಚಿ) ಹರಿದಾಡುತ್ತಿದೆ. ಬಸ್ ಗದ್ದಲ ಇದ್ದ ಕಾರಣ ಮಹಿಳೆ ಕಿಟಕಿಯಿಂದ ಹತ್ತುವಾಗ ಕೈ ಮುರಿದಿದೆ ಎಂದು ಆರೋಪಿಸಲಾಗಿದೆ. ಆದ್ರೆ, ಇದನ್ನು ಕೆಎಸ್‌ಆರ್‌ಟಿಸಿ ಅಲ್ಲಗೆಳೆದಿದ್ದು, ಘಟನೆ ಬಗ್ಗೆ ಸ್ಪಷ್ಟನೆ ನೀಡಿದೆ. ಕಿಟಕಿಯಿಂದ ಹತ್ತುವಾಗ ಮಹಿಳೆಯ ಕೈ ಕಟ್ ಆಗಿಲ್ಲ. ಬದಲಿಗೆ ಲಾರಿಯೊಂದು ಡಿಕ್ಕಿ ಹೊಡೆದಿದ್ದರಿಂದ ಮಹಿಳೆ ಕೈಗೆ ಗಂಭೀರ ಗಾಯವಾಗಿದೆ ಎಂದು ಕೆಎಸ್‌ಆರ್‌ಟಿಸಿ ತಿಳಿಸಿದೆ.

ಶಕ್ತಿ ಯೋಜನೆಯ ಕೊಡುಗೆಯಿಂದ ಮಹಿಳೆ ಕೈ ಕಳೆದುಕೊಳ್ಳಬೇಕಾಯ್ತು ಎಂದು ನೆಟ್ಟಿಗರು ಕಾಂಗ್ರೆಸ್ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿರುವ ಬಗ್ಗೆ ಕೆಎಸ್‌ಆರ್‌ಟಿಸಿ ಸುತ್ತೋಲೆ ಹೊರಡಿಸುವ ಮೂಲಕ ವಿಡಿಯೋ ಬಗ್ಗೆ ಸತ್ಯಾಸತ್ಯತೆ ತಿಳಿಸಿದೆ. ಮಹಿಳೆ ಬಸ್ಸಿನ ಕಿಟಕಿಯಿಂದ ಹತ್ತುವಾಗ ಕೈ ಮುರಿದಿದೆ ಎಂಬಂತೆ ಅಪಪ್ರಚಾರ ಮಾಡಲಾಗುತ್ತಿದೆ ಎಂದಿದೆ.

# ಹೊಂದಾಣಿಕೆ ಬಿಟ್ಟು ಬಿಜೆಪಿ ಸರ್ಕಾರದ ಅಕ್ರಮಗಳನ್ನು ತನಿಖಾ ಮಾಡಿಸಿ : ಕಾಂಗ್ರೆಸ್ ಶಾಸಕರ ಒತ್ತಡ

**ಬೆಂಗಳೂರು:**ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೇಳಿಬಂದ ಭ್ರಷ್ಟಾಚಾರಗಳು, ಆರೋಪಗಳನ್ನು ತನಿಖೆಗೊಳಪಡಿಸಲು ಹೊಂದಾಣಿಕೆ ರಾಜಕಾರಣ ಮಾಡಬಾರದು ಎಂದು ಕಾಂಗ್ರೆಸ್ ಶಾಸಕರು ಒತ್ತಡ ಹೇರುತ್ತಿದ್ದಾರೆ. ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಂಚ ಖಾತ್ರಿಗಳನ್ನು ನೀಡುವ ಜೊತೆಗೆ ಪ್ರಮುಖವಾಗಿ ಹಿಂದಿನ ಬಿಜೆಪಿ ಸರ್ಕಾರದ ಭ್ರಷ್ಟಾಚಾರವನ್ನು ಪ್ರಸ್ತಾಪಿಸಿತ್ತು. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಸ್ವಚ್ಛ ಹಾಗೂ ಭ್ರಷ್ಟಾಚಾರಮುಕ್ತ ಆಡಳಿತ ನೀಡುವುದಾಗಿ ಭರವಸೆ ನೀಡಲಾಗಿದೆ. ಅದನ್ನು ಮರೆಯಬಾರದು ಎಂದು ಕಾಂಗ್ರೆಸ್ ಶಾಸಕರು ಒತ್ತಾಯಿಸುತ್ತಿದ್ದಾರೆ.

ಕೋವಿಡ್ ವೇಳೆ ವೈದ್ಯಕೀಯ ಸಾಮಗ್ರಿಗಳ ಖರೀದಿ ಹಾಗೂ ಇತರ ಅವ್ಯವಹಾರಗಳು, ಬಿಟ್ ಕಾಯಿನ್ ಹಗರಣ, ಪಿಎಸ್‌ಐ ಸಹಾಯಕ ಪ್ರಾಧ್ಯಾಪಕರು, ಸಹಕಾರ ಇಲಾಖೆ ಸೇರಿದಂತೆ ವಿವಿಧ ನೇಮಕಾತಿ ಹಗರಣಗಳ ಕುರಿತು ಕಾಂಗ್ರೆಸ್ ಭಾರಿ ಪ್ರಮಾಣದಲ್ಲಿ ಚರ್ಚೆ ಮಾಡಿತ್ತು.

ಕೃಷಿ, ತೋಟಗಾರಿಕೆ ಇಲಾಖೆಗಳಲ್ಲಿ ಸಹಾಯಧನ ಬಿಡುಗಡೆ ವೇಳೆಯಲ್ಲಿ ನಡೆದಿರುವ ಹಗರಣಗಳ ಕುರಿತು ದಾಖಲಾತಿಗಳನ್ನು ಬಿಡುಗಡೆ ಮಾಡಿತ್ತು. ಸಮಾಜಕಲ್ಯಾಣ ಇಲಾಖೆಯ ಗಂಗಾಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಯೋಜನೆಗಳಲ್ಲಿ ಅವ್ಯವಹಾರಗಳಾಗಿರುವುದನ್ನು ಹಿಂದಿನ ಸರ್ಕಾರವೇ ಒಪ್ಪಿಕೊಂಡು ತನಿಖೆಗೆ ಒಪ್ಪಿಸಿದೆ. ಆದರೆ ಬಹುತೇಕ ತನಿಖೆಗಳು ಹಳ್ಳ ಹಿಡಿದಿವೆ.

ನಾನು ರಾಜಕೀಯ ಸನ್ಯಾಸಿಯಲ್ಲ, ಸಿಕ್ಸ್ ಹೊಡೆಯಲು ಹೋಗಿ ಬೋಲ್ಡ್ ಆಗಿದ್ದೇನೆ ಅಷ್ಟೇ : ಸೋಮಣ್ಣ

ತಪ್ಪಿತಸ್ಥರನ್ನು ರಕ್ಷಣೆ ಮಾಡಲು ಅಥವಾ ಕೆಳಹಂತದ ಅಕಾರಗಳನ್ನಷ್ಟೇ ಹೊಣೆ ಮಾಡಿ ಉನ್ನತ ಮಟ್ಟದಲ್ಲಿರುವವರನ್ನು ಪಾರು ಮಾಡಲು ಹುನ್ನಾರಗಳು ನಡೆದಿವೆ. ಇದಕ್ಕೆ ಅವಕಾಶವಾಗದಂತೆ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು ಎಂಬುದು ಶಾಸಕರ ಆಗ್ರಹವಾಗಿದೆ.

ಬಿಜೆಪಿ ಇತ್ತೀಚೆಗೆ ಜನಪರ ಯೋಜನೆಗಳ ವಿಷಯದಲ್ಲಿ ರಾಜಕೀಯ ಮಾಡುತ್ತಾ ಅಪಪ್ರಚಾರ ನಡೆಸುತ್ತಿದೆ. ಸರ್ಕಾರದ ವಿರುದ್ಧ ಷಡ್ಯಂತ್ರ ರೂಪಿಸಿ ಜನಾಭಿಪ್ರಾಯವನ್ನು ದಿಕ್ಕು ತಪ್ಪಿಸುತ್ತಿದೆ. ತಪ್ಪು ಮಾಡಿ ಅಕಾರ ಕಳೆದುಕೊಂಡಿರುವ ಬಿಜೆಪಿಗೆ ಪಾಠ ಕಲಿಸುವ ವಿಷಯದಲ್ಲಿ ಕಾಂಗ್ರೆಸ್ ನುಣುಚಿಕೊಳ್ಳುವ ಪ್ರಯತ್ನ ಮಾಡಬಾರದು. ನಿರ್ದಾಕ್ಷಿಣ್ಯವಾಗಿ ವರ್ತಿಸದೇ ಇದ್ದರೆ ಲೋಕಸಭೆ ಚುನಾವಣೆಯಲ್ಲಿ ಜನರಿಗೆ ಉತ್ತರ ನೀಡಲು ಕಾಂಗ್ರೆಸ್‌ಗೆ ಮುಖವಿಲ್ಲದಂತಾಗುತ್ತದೆ ಎಂಬ ಅಭಿಪ್ರಾಯವನ್ನು ಶಾಸಕರು ವ್ಯಕ್ತಪಡಿಸುತ್ತಿದ್ದಾರೆ.



ಪಿಎಸ್‌ಐ ಹಗರಣದಲ್ಲಿ ಎಡಿಜಿಪಿಯ ಬಂಧನಕ್ಕೆ ತನಿಖೆ ನಿಂತುಹೋಗಿದೆ. ಬಂತ ಆರೋಪಿಗಳಿಗೆ ನ್ಯಾಯಾಧಿಶರ ಮುಂದೆ ಹೇಳಿಕೆ ನೀಡಲು ಅವಕಾಶ ಮಾಡಿಕೊಡಬೇಕೆಂಬುದು ಕಾಂಗ್ರೆಸ್‌ನ ಪ್ರಮುಖ ಬೇಡಿಕೆಯಾಗಿತ್ತು. ಈಗ ಕಾಂಗ್ರೆಸ್ ಪಕ್ಷವೇ ಅಧಿಕಾರದಲ್ಲಿದೆ. ತನಿಖಾಧಿಕಾರಿಗಳ ಜೊತೆ ಸಮಾಲೋಚನೆ ನಡೆಸಿ ಬಂಧಿತ ಎಡಿಜಿಪಿ ಅಮೃತ್‌ಪಾಲ್ ಹಾಗೂ ಇತರ ಅಧಿಕಾರಿಗಳು ನ್ಯಾಯಾಧಿಶರ ಮುಂದೆ ಹೇಳಿಕೆ ನೀಡಲು ಅವಕಾಶ ಮಾಡಿಕೊಡಬೇಕು ಎಂದು ಶಾಸಕರು ಒತ್ತಾಯಿಸಿದ್ದಾರೆ.

ಪಿಎಸ್‌ಐ ಹಗರಣದಲ್ಲಿ ಉನ್ನತ ಮಟ್ಟದ ಹಸ್ತಕ್ಷೇಪವಿದೆ. 300 ಕೋಟಿ ರೂ.ಗಳಿಗೂ ಅಧಿಕ ಮೊತ್ತದ ಹಣದ ವಹಿವಾಟು ನಡೆದಿದೆ ಎಂಬ ಆರೋಪಗಳನ್ನು ಕಾಂಗ್ರೆಸ್ ಮಾಡಿತ್ತು. ಆದರೆ ಅಧಿಕಾರಕ್ಕೆ ಬರುತ್ತಿದ್ದಂತೆ ಈ ಬಗ್ಗೆ ಚಕಾರವೆತ್ತದೆ ಪ್ರಕರಣ ಇನ್ನೂ ನ್ಯಾಯಾಲಯದಲ್ಲಿದೆ ಎಂಬ ಹೇಳಿಕೆ ನೀಡಿ ಜಾರಿಕೊಳ್ಳುತ್ತಿದ್ದಾರೆ ಎನ್ನಲಾಗುತ್ತಿದೆ.

ಈ ರೀತಿಯ ದ್ವಿಮುಖ ಹಾಗೂ ಗೊಂದಲದ ನೀತಿಗಳು ಟೀಕೆಗೆ ಗುರಿಯಾಗಲಿವೆ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಸರ್ಕಾರ ಯಾವುದೇ ಮುಲಾಜಿಗೆ ಒಳಗಾಗದಂತೆ ಕಠಿಣ ಕ್ರಮ ಜರುಗಿಸಬೇಕೆಂದು ಶಾಸಕರು ಒತ್ತಾಯಿಸಿದ್ದಾರೆ.ಇತ್ತ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ನಡೆದ ಅವ್ಯವಹಾರಗಳ ತನಿಖೆಗೆ ಮೀನಾಮೇಷ ಎಣಿಸಲಾಗುತ್ತಿದೆ. ಆರೋಗ್ಯ ಕವಚ ಸೇರಿದಂತೆ ಎಲ್ಲಾ ಟೆಂಡರ್‌ಗಳನ್ನು ಸರ್ಕಾರ ರದ್ದುಗೊಳಿಸಿದೆ. ಆದರೆ ಅವ್ಯವಹಾರದ ಬಗ್ಗೆ ತನಿಖೆಗೆ ನಿರ್ದಿಷ್ಟ ಕ್ರಮ ಕೈಗೊಂಡಿಲ್ಲ.

ಈಗಲೂ ಪರಿಶೀಲನೆ, ಚರ್ಚೆ ಎಂದು ಕಾಲಾಹರಣ ಮಾಡಲಾಗುತ್ತಿದೆ ಎಂಬ ಆಕ್ಷೇಪಗಳು ಕೇಳಿಬಂದಿವೆ.

ಅಮೆರಿಕ ಡ್ರೋಣ್ ಖರೀದಿ ಇನ್ನೂ ಅಂತಿಮವಾಗಿಲ್ಲ : ರಕ್ಷಣಾ ಸಚಿವಾಲಯ

ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿನ ಲೋಪದೋಷಗಳ ಬಗ್ಗೆ ಕಾಂಗ್ರೆಸ್ ದೊಡ್ಡ ದನಿಯಲ್ಲಿ ಸದ್ದು ಮಾಡಿತ್ತು. ಆದರೆ ಈಗ ತಣ್ಣಗಾಗಿ ಹೋಗಿದೆ. ಬಿಟ್‌ಕಾಯಿನ್ ಹಗರಣದಲ್ಲಿ ಸಾವಿರಾರು ಕೋಟಿ ರೂ.ಗಳ ಹಗರಣ ಆಗಿದೆ ಎಂಬ ಆರೋಪಗಳನ್ನು ಮೆಗಾ ಧಾರಾವಾಹಿಗಳ ಮಾದರಿಯಲ್ಲಿ ಮಾಡಿದ್ದ ಕಾಂಗ್ರೆಸ್ ಈಗ ಅದನ್ನು ಮರೆತಂತೆ ವರ್ತಿಸುತ್ತಿದೆ.ಹಿಂದಿನ ಸರ್ಕಾರವೇ ಬಿಟ್ ಕಾಯಿನ್ ಹಗರಣದಲ್ಲಿ ಯಾವುದೇ ಸಾಕ್ಷ್ಯಗಳು ಇಲ್ಲ ಎಂದು ಪ್ರಕರಣವನ್ನು ಮುಚ್ಚಿ ಹಾಕಿದೆ.

ಕೆಲವು ಸಾಕ್ಷಿಗಳು ನಾಶವಾಗಿದೆ ಎಂಬ ಆರೋಪಗಳಿವೆ. ಆದರೆ ಹಗರಣದಲ್ಲಿ ಬಂತನಾಗಿದ್ದ ಪ್ರಮುಖ ಆರೋಪಿ ಶ್ರೀಕಿ ಬಿಟ್‌ಕಾಯಿನ್ ವಂಚನೆಯ ಜೊತೆಗೆ ಈ ಪ್ರಕ್ಯೂರ್‌ಮೆಂಟ್ ಪೋರ್ಟರ್‌ಗೆ ಕನ್ನ ಹಾಕಿ ಒಂದಿಷ್ಟು ಹಣ ಕಳವು ಮಾಡಿದ್ದಾನೆ ಎಂಬ ಆರೋಪ ದಾಖಲಾಗಿತ್ತು. ಕನಿಷ್ಟ ಆ ಪ್ರಕರಣವನ್ನಾದರೂ ತನಿಖೆ ಆರಂಭಿಸಬೇಕು ಎಂಬುದು ಕಾಂಗ್ರೆಸಿಗರ ಆಗ್ರಹವಾಗಿದೆ.ಬಿಜೆಪಿ ಸರ್ಕಾರದಲ್ಲಿ ನಡೆದಿದ್ದ ಹಗರಣ, ಅವ್ಯವಹಾರಗಳ ಬಗ್ಗೆ ಜನಾಭಿಪ್ರಾಯ ರೂಪಿಸಿದಂತೆ ಈಗ ತನಿಖೆ ಮಾಡಿ ಸತ್ಯಾಂಶ ಬಯಲು ಮಾಡದಿದ್ದರೆ ಸಾರ್ವಜನಿಕರ ವಿರೋಧ ಕಟ್ಟಿಕೊಳ್ಳಬೇಕಾಗುತ್ತದೆ ಎಂದು ಶಾಸಕರು ಎಚ್ಚರಿಸಿದ್ದಾರೆ.

# ಆಪರೇಶನ್ ಕಮಲವೇ ಬಿಜೆಪಿ ಸೋಲಿಗೆ ಕಾರಣ ಎಂದ ಈಶ್ವರಪ್ಪ; ಸಿಟಿ ರವಿ, ರವಿ ಕುಮಾರ್ ಹೇಳಿದ್ದೇನು ಗೊತ್ತಾ?



**ಬೆಂಗಳೂರು:** ಬಿಜೆಪಿಯಲ್ಲಿ ಶಿಸ್ತು ಹೋಗಿದೆ, ಕಾಂಗ್ರೆಸ್ ಗಾಳಿ ನಮ್ಮ ಮೇಲೂ ಬಂದಿದೆ. ಕಾಂಗ್ರೆಸ್ ನಾಯಕರನ್ನು ಕರೆದುಕೊಂಡು ಬಂದಿದ್ದಕ್ಕೆ ಅನುಭವಿಸುತ್ತಿದ್ದೇವೆ ಎಂದು ಹೇಳುವ ಮೂಲಕ ಬಿಜೆಪಿ ಸೋಲಿಗೆ ಆಪರೇಷನ್ ಕಮಲವೇ ಕಾರಣ ಎಂದು ಮಾಜಿ ಸಚಿವ ಕೆಎಸ್ ಈಶ್ವರಪ್ಪ ಪರೋಕ್ಷವಾಗಿ ಹೇಳಿದ್ದಾರೆ. ಇದು ಬಿಜೆಪಿಯಲ್ಲಿ ಆಂತರಿಕ ಚರ್ಚೆಗೆ ಕಾರಣವಾಗಿದೆ.

ಈ ಬಗ್ಗೆ ಪ್ರತಿಕ್ರಿಯೆ ನೀಡಿದ ವಿಧಾನ ಪರಿಷತ್ ಬಿಜೆಪಿ ಸದಸ್ಯ ಎನ್ ರವಿಕುಮಾರ್, ಕೆ.ಎಸ್.ಈಶ್ವರಪ್ಪ ಅವರು ಯಾವ ಹಿನ್ನೆಲೆಯಲ್ಲಿ ಹೇಳಿದ್ದಾರೋ ಗೊತ್ತಿಲ್ಲ. ಕಾಂಗ್ರೆಸ್‌ನಿಂದ ಬಂದವರಿಂದಲೇ ನಾವು ಅಧಿಕಾರ ನಡೆಸಿದ್ದು. ಪಕ್ಷಕ್ಕೆ ಬಂದ ಬಹಳಷ್ಟು ವಲಸಿಗರು ಗೆದ್ದಿದ್ದಾರೆ. ಲೋಕಸಭೆ ಚುನಾವಣೆಯನ್ನು ಎಲ್ಲರೂ ಒಟ್ಟಾಗಿ ಎದುರಿಸುತ್ತೇವೆ. ಹೊರಗಿನವರು, ಒಳಗಿನವರು ಎಂಬ ಭೇದ ಇಲ್ಲ ಎಂದರು.

ಈಶ್ವರಪ್ಪ ಹೇಳಿಕೆ ಬಗ್ಗೆ ಮಾತನಾಡಿದ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿಟಿ ರವಿ, ನಾನು ಇದರ ಬಗ್ಗೆ ಸಾರ್ವಜನಿಕ ಚರ್ಚೆಗೆ ಹೋಗುವುದಿಲ್ಲ. ನಾನು ಅಂದು ದೆಹಲಿಯಲ್ಲಿ ಕೇವಲ ಅರ್ಕಾವತಿಗೆ ಸಂಬಂಧಿಸಿದಂತೆ ಮಾತ್ರ ಹೇಳಿದ್ದೆ. ಅರ್ಕಾವತಿ ವಿಷಯದಲ್ಲಿ ನಾವು ಬಿಗಿ ನಿಲುವು ತೆಗೆದುಕೊಂಡಿದ್ದರೆ ಅಧಿಕಾರ ಕಳೆದುಕೊಳ್ಳುವ ಪರಿಸ್ಥಿತಿ ಬರುತ್ತಿರಲಿಲ್ಲ ಅಂತ ನಾನು ದೆಹಲಿಯಲ್ಲಿ ಹೇಳಿದ್ದೆ. ಹೀಗಾಗಿ ಎಲ್ಲವನ್ನೂ ಬಂದವರ ತಲೆ ಮೇಲೆ ಕಟ್ಟಲು ಇಷ್ಟ ಪಡುವುದಿಲ್ಲ. ಯಾರು ಸರಿ ಅಂತಲೂ ನಾವು ಹೇಳುವುದಿಲ್ಲ. ಆದರೆ ಪಕ್ಷದ ವೇದಿಕೆಯಲ್ಲಿ ಏನೇ ಇದ್ದರೂ ಮಾತಾಡುತ್ತೇನೆ. ನಮ್ಮಿಂದ ಏನೂ ತಪ್ಪು ಆಗಿಲ್ಲ ಅನ್ನೋದು ಬೇಡ, ಕೆಲವು ತಪ್ಪಾಗಳಾಗಿವೆ ಎಂದರು.

# 2,000 ನೋಟು ವಾಪಸ್ : ಆರ್ಥಿಕತೆ ಮೇಲೆ ಪರಿಣಾಮ ಇಲ್ಲ- ಗೌರ್ನರ್ ಶಕ್ತಿಕಾಂತದಾಸ್

ನವದೆಹಲಿ, - ದೇಶದಲ್ಲಿ 2 ಸಾವಿರ ರೂ. ಮುಖ ಬೆಲೆಯ ಕರೆನ್ಸಿ ನೋಟುಗಳನ್ನು ಚಲಾವಣೆಯಿಂದ ಹಿಂತೆಗೆದುಕೊಳ್ಳುತ್ತಿರುವುದು ದೇಶದ ಆರ್ಥಿಕತೆ ಮೇಲೆ ಯಾವುದೇ ವ್ಯತಿರಿಕ್ತ ಪರಿಣಾಮ ಬೀರಿಲ್ಲ ಎಂದು ರಿಸರ್ವ್ ಬ್ಯಾಂಕ್‌ನ ಗೌರ್ನರ್ ಶಕ್ತಿಕಾಂತದಾಸ್ ಹೇಳಿದ್ದಾರೆ.



ಕಳೆದ ಮೇ 19 ರಂದು ರಿಸರ್ವ್ ಬ್ಯಾಂಕ್ 2 ಸಾವಿರ ಮುಖ ಬೆಲೆಯ ನೋಟುಗಳನ್ನು ಚಲಾವಣೆಯಿಂದ ಹಿಂತೆಗೆದುಕೊಳ್ಳುವ ತೀರ್ಮಾನ ಮಾಡಿತ್ತು. ಈ ನೋಟುಗಳನ್ನು ಜನ ಸೆಪ್ಟೆಂಬರ್ 3 ರವರೆಗೂ ಬ್ಯಾಂಕ್‌ಗಳಲ್ಲಿ ಬದಲಿಸಲು, ಠೇವಣಿ ಮಾಡಲು ಅವಕಾಶವನ್ನು ಕಲ್ಪಿಸಿತ್ತು. ಇದರಿಂದ ದೇಶದ ಆರ್ಥಿಕತ ಮೇಲೆ ವ್ಯತಿರಿಕ್ತ ಪರಿಣಾಮಗಳಾಗಬಹುದು ಎಂಬ ವರದಿಗಳು ಸುಳ್ಳಾಗಿದ್ದು, 2 ಸಾವಿರ ಮುಖ ಬೆಲೆಯ ನೋಟುಗಳನ್ನು ಚಲಾವಣೆಯಿಂದ ಹಿಂತೆಗೆದುಕೊಳ್ಳುವ ನಿರ್ಧಾರದಿಂದ ಆರ್ಥಿಕತೆ ಮೇಲೆ ಯಾವುದೇ ಋಣಾತ್ಮಕ ಪರಿಣಾಮ ಬೀರಿಲ್ಲ ಎಂದು ರಿಸರ್ವ್ ಬ್ಯಾಂಕ್‌ನ ಶಕ್ತಿಕಾಂತ್ ದಾಸ್ ಆಂಗ್ಲ ಸುದ್ದಿ ಸಂಸ್ಥೆಗೆ ನೀಡಿದ ಸಂದರ್ಶನದಲ್ಲಿ ಹೇಳಿದ್ದಾರೆ.

ಭಾರತದ ಆರ್ಥಿಕತೆ ಅನಿಶ್ಚಿತತೆಯ ಸವಾಲುಗಳನ್ನು ಎದುರಿಸುತ್ತಿದೆ. ನಮ್ಮ ಮುಂದೆ 2-3 ಸವಾಲುಗಳಿವೆ. ಮೊದಲನೆಯದು ಅಂತಾರಾಷ್ಟ್ರೀಯ ಅನಿಶ್ಚಿತತೆ, ಎರಡನೆಯದು ಎಲ್‌ನಿನೋ ಚಂಡಮಾರುತದ ಮುನ್ಸೂಚನೆ ಮತ್ತು ಇತರ ಮುಖ್ಯವಾಗಿ ಹವಮಾನ ಸಂಬಂಧಿತ ಅನಿಶ್ಚಿತತೆಯ ಸವಾಲುಗಳು ದೇಶದ ಆರ್ಥಿಕ ಪರಿಸ್ಥಿತಿಯ ಮುಂದಿವೆ ಎಂದು ಅವರು ಹೇಳಿದರು. ಹಣ ದುಬ್ಬರವನ್ನು ಶೇ. 4ಕ್ಕೆ ಇಳಿಸಲು ಶ್ರಮಿಸುತ್ತಿದ್ದೇವೆ. ಆಹಾರ, ಹಣ ದುಬ್ಬರಕ್ಕೆ ಎಲ್ ನಿನೋ ಮುನ್ಸೂಚನೆ ಸವಾಲಾಗಿದೆ ಎಂದು ಅವರು ಹೇಳಿದರು.

# ಭದ್ರಾ ಮೇಲ್ದಂಡೆ ಯೋಜನೆ: ಒಂದು ವರ್ಷದೊಳಗೆ ಪೂರ್ಣ



**ಚಿತ್ರದುರ್ಗ:**ಬಯಲಸೀಮೆಯ ಚಿತ್ರದುರ್ಗ ಜಿಲ್ಲೆಗೆ ವರದಾನವಾಗಿರುವ ಭದ್ರಾ ಮೇಲ್ದಂಡೆ ಯೋಜನೆಯನ್ನು ಒಂದು ವರ್ಷದೊಳಗಾಗಿ ಪೂರ್ಣಗೊಳಿಸಲು ಪ್ರಾಮಾಣಿಕವಾಗಿ ಯತ್ನಿಸಲಾಗುವುದು ಎಂದು ಯೋಜನೆ ಹಾಗೂ ಸಾಂಖ್ಯಿಕ ಸಚಿವರು ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.ಶಿವಮೊಗ್ಗ ಜಿಲೆಯ ಭದ್ರಾ ಮೇಲ್ದಂಡೆ ಕಾಮಗಾರಿ ಪ್ರದೇಶ ಆಗಿರುವ ಶಿವಮೊಗ್ಗ ಜಿಲ್ಲೆ ಹಾಗೂ ಚಿಕ್ಕಮಗಳೂರು ಜಿಲ್ಲೆಯ ವಿವಿಧೆಡೆ ಯೋಜನೆ ಕಾಮಗಾರಿಗಳನ್ನು ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಭದ್ರಾ ಮೇಲ್ದಂಡೆ ಯೋಜನೆಯಡಿ ಪ್ಯಾಕೇಜ್-1ರಲ್ಲಿ ತುಂಗಾ ನಂದಿಯಿಂದ 17.40 ಟಿಎಂಸಿ ನೀರನ್ನು ಲಿಫ್ಟ್ ಮಾಡಿ ಭದ್ರಾ ಜಲಾಶಯಕ್ಕೆ ಹರಿಸುವ ಕಾಮಗಾರಿಗೆ ಇನ್ನಷ್ಟು ವೇಗ ನೀಡಲು ಶನಿವಾರದಂದು ಭದ್ರಾ ಮೇಲ್ದಂಡೆ ಯೋಜ ನೆಯ ವಿವಿಧ ಕಾಮಗಾರಿಗಳನ್ನು ಜಿಲ್ಲೆಯ ಎಲ್ಲ ಶಾಸಕರೊಂದಿಗೆ ವೀಕ್ಷಣೆ ಮಾಡಲಾಗಿದ್ದು, ಆಗಬೇಕಾದ ಕೆಲಸ ಕಾರ್ಯಗಳು ಬಗ್ಗೆ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ಅವರ ಬಳಿ ಚರ್ಚಿಸ ಲಾಗುವುದು ಎಂದರು.

# ನೂತನ ಶಾಸಕರಿಗೆ ಮೂರು ದಿನಗಳ ಕಾಲ ತರಬೇತಿ ಶಿಬಿರ

**ಬೆಂಗಳೂರು:** ರಾಜ್ಯದ 16ನೇ ವಿಧಾನಸಭೆಗೆ ನೂತನವಾಗಿ ಆಯ್ಕೆಯಾಗಿರುವ ಸದಸ್ಯರುಗಳಿಗೆ(Karnataka Legislative assembly) ಬೆಂಗಳೂರಿನ ನೆಲಮಂಗಲದ ಸಮೀಪ ಇರುವ ಧರ್ಮಸ್ಥಳದ ಕ್ಷೇಮವನದಲ್ಲಿ ಇಂದು ಜೂನ್ 26 ಸೋಮವಾರದಿಂದ 28ರ ವರೆಗೆ ಮೂರು ದಿನಗಳ ಕಾಲ ತರಬೇತಿ ಶಿಬಿರ ಆಯೋಜಿಸಲಾಗಿದೆ.ಕಾರ್ಯಕ್ರಮ ವನ್ನು ಮಧ್ಯಾಹ್ನ 12 ಗಂಟೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿ ದ್ದಾರೆ. ವಿಧಾನಸಭೆ ಅಧ್ಯಕ್ಷ ಯು.ಟಿ. ಖಾದರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.ಮುಖ್ಯ ಅತಿಥಿಗಳಾಗಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಕಾನೂನು ಸಚಿವ ಎಚ್.ಕೆ. ಪಾಟೀಲ್ ಪಾಲ್ಗೊಳ್ಳಲಿದ್ದಾರೆ.

# ರಾಜಕೀಯದಲ್ಲಿ ರಿಂಗ್ ಮಾಸ್ಟರ್ ಆಗಬೇಕು : ಖಾದರ್

ಬೆಂಗಳೂರು, - ರಾಜಕೀಯ ಎಂದರೆ ಸರ್ಕಸ್ ಇದ್ದಂತೆ, ಇಲ್ಲಿ ಒಂದಲ್ಲಾ ಒಂದು ದಿನ ಪ್ರತಿಯೊಬ್ಬರು ರಿಂಗ್ ಮಾಸ್ಟರ್ ಆಗಬೇಕು ಎಂದು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಅಭಿಪ್ರಾಯಪಟ್ಟರು.

ನಗರದಲ್ಲಿಂದು ನೆಲಮಂಗಲದ ಎಸ್.ಡಿ.ಎಮ್ ಇನ್‌ಸ್ಟಿಟ್ಯೂಟ್ ಆಫ್ ನ್ಯಾಚುರೋಪತಿ ಕ್ಷೇಮವನದಲ್ಲಿ ರಾಜ್ಯದ 16ನೇ ವಿಧಾನ ಸಭೆಗೆ ನೂತನವಾಗಿ ಆಯ್ಕೆಯಾಗಿರುವ ಮಾನ್ಯ ಸದಸ್ಯರುಗಳಿಗೆ ಎರಡು ದಿನಗಳ ಕಾಲ ಹಮ್ಮಿಕೊಳ್ಳಲಾಗಿರುವ ತರಬೇತಿ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜಕೀಯ ಎಂದರೆ ಒಂದು ಸರ್ಕಸ್ ಇದ್ದಂತೆ. ಇದರಲ್ಲಿ ಹುಲಿ, ಸಿಂಹ, ಕುದುರೆ, ಕೋತಿ ಎಲ್ಲವೂ ಇರುತ್ತದೆ. ಆದರೆ, ಇದನ್ನು ರಿಂಗ್ ಮಾಸ್ಟರ್ ನಿರ್ವಹಣೆ ಮಾಡುತ್ತಾನೆ. ಹೀಗಾಗಿ, ಹೊಸ ಶಾಸಕರು ರಿಂಗ್ ಮಾಸ್ಟರ್ ಅಂತೆ ಆಗಬೇಕು ಎಂದು ಹೇಳಿದರು.

ರಾಜಕೀಯ ಗಣಿತ ಅಲ್ಲ. ಇದರಲ್ಲಿ ಪರಿಹಾರವೂ ಸಿಗುವುದಿಲ್ಲ. ಇಲ್ಲಿ ಜವಾಬ್ದಾರಿ ಇರಬೇಕು.ಸಿಕ್ಕ ಅವಕಾಶ ಸದುಪಯೋಗ ಪಡಿಸಿಕೊಂಡು ಜನ ಸಾಮಾನ್ಯರ ಜೀವನ ರೂಪಿಸಬೇಕು ಎಂದ ಅವರು, ಒಂದು ವಾಹನಕ್ಕೆ ಅದರ ಬಿಡಿಭಾಗಗಳು ಎಷ್ಟು ಮುಖ್ಯವೂ ಶಾಸಕರ, ಕಾರ್ಯ ವೈಖರಿಯೂ ಅಭಿವೃದ್ಧಿಗೆ ಅಷ್ಟೇ ಮುಖ್ಯ ಎಂದು ನುಡಿದರು.

ಪುನಃ ಶಾಂತಿ ಮತ್ತು ಸೌಹಾರ್ದತೆ ವಾತಾವರಣ ನಿರ್ಮಿಸಲು ಎಲ್ಲರೂ ಪ್ರಯತ್ನಿಸಬೇಕಾಗಿದೆ. ಹಾಗೇ, ಸಾರ್ವಜನಿಕ ಮತ್ತು ರಾಜಕೀಯ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವವರು ಶಾಂತಿ, ಸುವ್ಯವಸ್ಥೆ ಹಾಗೂ ನೀತಿ ಸಂಹಿತೆ ಕಾಪಾಡುವ ಮನೋಪ್ರವೃತ್ತಿ ಬೆಳೆಸಿಕೊಳ್ಳುವುದು ಅತ್ಯವಶಕವಾಗಿದೆ ಎಂದು ಕರೆ ನೀಡಿದರು.

ರಾಜಕೀಯ ಹಾಗೂ ಯಾವುದೇ ಕೆಲಸ ಮಾಡುವಾಗ ಟೀಕೆ ಟಿಪ್ಪಣಿ ಸಾಮಾನ್ಯ. ಇದರಿಂದ ನಾವು ಕುಗ್ಗುವಿಕೆ ಬೇಡ. ಮುಂದಿನ ದಿನಗಳಲ್ಲಿ ಎಲ್ಲವೂ ಸರಿ ಹೋಗಲಿದೆ ಎಂದ ಅವರು, ಪದವಿ ಪೂರ್ಣಗೊಳಿಸಿದವರಿಗೆ ಒಂದು ವರ್ಷಗಳ ಕಾಲ ವಿಶೇಷ ತರಬೇತಿ ನೀಡುವ ಕೇಂದ್ರ ಆರಂಭಿಸುವ ಚಿಂತೆ ಇದೆ ಎಂದರು.ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ವಿಧಾನ ಪರಿಷತ್ ಸಭಾಪತಿ ಬಸವರಾಜ ಎಸ್ ಹೊರಟ್ಟಿ, ಕಾನೂನು ಸಚಿವ ಎಚ್ ಕೆ ಪಾಟೀಲ್, ವಸತಿ ಮತ್ತು ಅಲ್ಪಸಂಖ್ಯಾತ ಕಲ್ಯಾಣ, ಬಿ ಝಡ್ ಜಮೀರ್ ಅಹ್ಮದ್ ಖಾನ್ ಸೇರಿದಂತೆ ಪ್ರಮುಖರಿದ್ದರು.

### ರಾಜಕೀಯ ಕೆಟ್ಟಿದೆ..!

ಈಗಿನ ರಾಜಕೀಯ ಪರಿಸ್ಥಿತಿ ಸಂಪೂರ್ಣ ಕೆಟ್ಟಿದೆ.ಅದರಲ್ಲೂ ಮತದಾರರು ಯಾವ ಯಾವ ಆಶ್ವಾಸನೆ ಕೇಳುತ್ತೇರೆ ಎನ್ನುವುದೇ ಅಚ್ಚರಿ. ಇನ್ನೂ, ಜನಪ್ರತಿನಿಧಿಗಳ ಜವಾಬ್ದಾರಿ ಹೆಚ್ಚಿದ್ದು, ಸದನದ ಸಮಯ ಅವಕಾಶ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಬಸವರಾಜ ಎಸ್ ಹೊರಟ್ಟಿ ಕರೆ ನೀಡಿದರು.

# ವಾಸ್ತು ನಂಬಿಕೆಗೆ ಡೋಂಟ್ ಕೇರ್ ಎಂದ ಸಿದ್ದರಾಮಯ್ಯ ನಡೆಗೆ ಮೆಚ್ಚುಗೆ ಸೂಚಿಸಿದ 'ಮೇಷ್ಟು', ನೆಟ್ಟಿಗರು ಕಿಡಿ

**ಬೆಂಗಳೂರು:** ರಾಜ್ಯದಲ್ಲಿ ಎರಡನೇ ಬಾರಿಗೆ ಮುಖ್ಯಮಂತ್ರಿಯಾಗಿ ಅಧಿಕಾರಕ್ಕೇರಿರುವ ಸಿದ್ದರಾಮಯ್ಯವರು ತಮ್ಮ ನೇರ ನಡೆ-ನುಡಿಗೆ ಹೆಸರಾದವರು. ಮೊದಲಿನಿಂದಲೂ ಮೌಢ್ಯಗಳನ್ನು ವಿರೋಧಿಸುತ್ತಲೇ ಬಂದವರು. ಅದೇ ಕಾರಣಕ್ಕೆ ಹಲವರಿಗೆ ಸಿದ್ದರಾಮಯ್ಯ ಎಂದರೆ ಎಲ್ಲಿಲ್ಲದ ಅಭಿಮಾನ. ಇನ್ನೂ ಕೆಲವರಿಗೆ ಸಿದ್ದರಾಮಯ್ಯನವರ ಈ ನಡೆಯೇ ಅವರಿಗೆ ವಿರೋಧಿಗಳನ್ನು ಹುಟ್ಟುಹಾಕಿದ್ದುಂಟು. ಅದೇನೇ ಆದರೂ ಸಿದ್ದು ಮಾತ್ರ ತಮನನಿಸಿದ್ದನ್ನೇ ಮಾಡುವವರು.

ಚಾಮರಾಜನಗರ ಜಿಲ್ಲಾ ಕೇಂದ್ರಕ್ಕೆ ಮುಖ್ಯಮಂತ್ರಿ ಭೇಟಿ ನೀಡಿದರೆ ಅಧಿಕಾರ ಹೋಗುತ್ತದೆ ಎಂಬುದು ನಡೆದುಕೊಂಡು ಬಂದಿತ್ತು. ಆದರೆ, ಇದಕ್ಕೆ ತಿಲಾಂಜಲಿ ಹಾಡಿದ್ದು ಇದೇ ಸಿದ್ದರಾಮಯ್ಯ. ಮೊದಲನೇ ಅವಧಿಗೆ ಮುಖ್ಯಮಂತ್ರಿಯಾಗಿದ್ದ ವೇಳೆ ಚಾಮರಾಜನಗರ ಜಿಲ್ಲೆಗೆ ಭೇಟಿ ನೀಡುವ ಮೂಲಕ ಈ ಮೌಢ್ಯಕ್ಕೆ ತಿಲಾಂಜಲಿ ಹಾಡಿದ್ದರು.ಇದೀಗ ಇಂತದ್ದೇ ವಿಚಾರಕ್ಕೆ ಸಿದ್ದರಾಮಯ್ಯ ಮತ್ತೊಮ್ಮೆ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ವಾಸ್ತುವಿನ ಕಾರಣದಿಂದ ಹಲವು ವರ್ಷಗಳಿಂದ ಮುಚ್ಚಿದ್ದ ವಿಧಾನಸೌಧದ ಸಿಎಂ ಕಚೇರಿಯ ದಕ್ಷಿಣ ದ್ವಾರವನ್ನು ತೆರೆಸುವ ಮೂಲಕ ಮತ್ತೊಮ್ಮೆ ಸುದ್ದಿಯಾಗಿದ್ದಾರೆ.

ಶನಿವಾರ (ಜೂನ್ 24) ವಿಧಾನಸೌಧಕ್ಕೆ ಆಗಮಿಸಿದ ಸಿದ್ದರಾಮಯ್ಯ ಅವರು ಬಾಗಿಲು ಮುಚ್ಚಿರುವುದನ್ನು ಕಂಡು ಅಧಿಕಾರಿಗಳನ್ನು ಪ್ರಶ್ನಿಸಿದ್ದಾರೆ. ವಾಸ್ತು ಸರಿಯಿಲ್ಲದ ಕಾರಣ ಬಾಗಿಲು ಮುಚ್ಚಿರುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ. ಆದರೆ, ಸಿದ್ದರಾಮಯ್ಯ ಅವರು ತಕ್ಷಣವೇ ಆ ಬಾಗಿಲು ತೆರೆಯುವಂತೆ ಸೂಚನೆ ನೀಡಿದ್ದಾರೆ. ಬಾಗಿಲು ತೆರೆದ ಬಳಿಕ ಅದೇ ಬಾಗಿಲ ಮೂಲಕವೇ ಸಿಎಂ ಕಚೇರಿಗೆ ಪ್ರವೇಶಿಸಿದ್ದಾರೆ.

ಬಳಿಕ ಟ್ವೀಟ್ ಮಾಡಿರುವ ಅವರು, ಜನರ ಬಗ್ಗೆ ಕಾಳಜಿ, ನಡತೆಯಲ್ಲಿ ಪ್ರಾಮಾಣಿಕತೆ, ಕರ್ತವ್ಯದಲ್ಲಿ ನಿಷ್ಠೆ ನಮ್ಮೊಳಗಿದ್ದರೆ ದಿಕ್ಕು, ಘಳಿಗೆ, ಮುಹೂರ್ತ ಎಲ್ಲವೂ ನಗಣ್ಯ. ವಾಸ್ತುದೋಷದ ಕಾರಣಕ್ಕಾಗಿ ಕಳೆದ ಐದು ವರ್ಷಗಳಿಂದ ಮುಚ್ಚಲಾಗಿದ್ದ ವಿಧಾನಸೌಧದ ಮುಖ್ಯಮಂತ್ರಿಗಳ ಕಚೇರಿಯ ದಕ್ಷಿಣ ದ್ವಾರವನ್ನು ತೆರೆಸಿ, ಅದೇ ಬಾಗಿಲಿನಿಂದ ಕಚೇರಿ ಪ್ರವೇಶ ಮಾಡಿದೆ. ಕೊಠಡಿಯೊಳಗೆ ಒಳ್ಳೆಯ ಗಾಳಿ, ಬೆಳಕು ಬರುವಂತಿದ್ದರೆ ಅದಕ್ಕಿಂತ ಉತ್ತಮ ವಾಸ್ತು ಬೇರಿಲ್ಲ. ನಡೆ-ನುಡಿ ಶುದ್ಧವಿದ್ದರೆ ಮತ್ತೆಲ್ಲವೂ ಶುಭದಾಯಕವಾಗಿರಲಿದೆ. ಜನತೆಯ ಆಶೀರ್ವಾದ ಇರಲಿ ಎಂದು ಬರೆದಿದ್ದಾರೆ.ಸಿದ್ದರಾಮಯ್ಯ ಅವರ ಈ ನಡೆಗೆ ಹಲವರು ಮೆಚ್ಚುಗೆ ವ್ಯಕ್ತಪಡಿಸಿದ್ದು, ಸಾಹಿತಿ, ನಿರ್ದೇಶಕ ನಾಗತಿಹಳ್ಳಿ ಚಂದ್ರಶೇಖರ್ ಕೂಡ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಟ್ವೀಟ್ ಮಾಡಿರುವ ಅವರು, 'ಇದೊಂದು ಸಣ್ಣ ಘಟನೆ ಎಂದು ಪರಿಗಣಿಸಬಾರದು. ಜನ ತಮ್ಮ ಖಾಸಗಿ ನಂಬಿಕೆಗಳನ್ನು ಅವರ ಮನೆಯೊಳಗೆ ಹೇಗಾದರೂ ಆಚರಿಸಿಕೊಳ್ಳಲಿ. ವಿಧಾನಸೌಧದಲ್ಲಿ ಮುಖ್ಯಮಂತ್ರಿಗಳ ವಾಸ್ತು ವಿರೋಧಿ ನಡೆ ಅವರೆಲ್ಲ ಮಂತ್ರಿಗಳಿಗೂ, ಅಧಿಕಾರಿಗಳಿಗೂ ಮತ್ತು ಸರ್ಕಾರೀ ಕಚೇರಿಗಳಿಗೂ ಮಾದರಿಯಾಗಲಿ. ಒಳ್ಳೆಯ ಗಾಳಿ, ಬೆಳಕು ಮತ್ತು ಹೃದಯ ನಿಜವಾದ ವಾಸ್ತು. ವಿಜ್ಞಾನದ ಎಲ್ಲ ಬಾಗಿಲುಗಳೂ ತೆರೆಯಲಿ' ಎಂದಿದ್ದಾರೆ.

ಇನ್ನು ನಾಗತಿಹಳ್ಳಿ ಚಂದ್ರಶೇಖರ್ ಅವರ ಟ್ವೀಟ್‌ಗೆ ನೆಟ್ಟಿಗರು ಕಿಡಿಕಾರಿದ್ದಾರೆ. ಅವರು ಕಾಂಗ್ರೆಸ್ ಬೆಂಬಲಿಸಿ ಟ್ವೀಟ್ ಮಾಡುತ್ತಿದ್ದಾರೆ ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ. 'ಹೃದಯ ವಾಸ್ತು. ಬಡ ಕಾಗೆ ಒಂದು ಕಾರಿನ ಮೇಲೆ ಕುಳಿತ ಕಾರಣ, ಜನರ ತೆರಿಗೆ ಹಣ ಪೋಲು ಮಾಡಿ ಹೊಸ ಕಾರು ಖರೀದಿಸಿದ ಮಾದರಿ ಮುಖ್ಯಮಂತ್ರಿ ಕೂಡ ಇವರೇ.. ಇವರ ಆ ನಡೆ ಅಧಿಕಾರಿಗಳು, ಮಂತ್ರಿಗಳಿಗೆ ಮಾದರಿಯಾಗದಿರಲಿ ಅಂತ ಯಾರು ಹೇಳಲೇ ಇಲ್ಲ ಎಂದು ಟ್ವಿಟರ್ ಬಳಕೆದಾರರೊಬ್ಬರು ಮೂದಲಿಸಿದ್ದಾರೆ.




ವಿಶ್ವಮಾದಕ ವಸ್ತು ವಿರೋಧಿ' ದಿನವಾದ ಇಂದು ಬೆಳಗ್ಗೆ ವಿಧಾನಸೌಧದ ಮುಂಭಾಗ ವಿದ್ಯಾರ್ಥಿಗಳಿಂದ ನಡೆದ ಬೃಹತ್ ಕಾಲ್ನಡಿಗೆ ಜಾಥಾ ಕಾರ್ಯಕ್ರಮಕ್ಕೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ರವರು ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಪ್ರಮಾಣ ಬೋಧಿಸಲಾಯಿತು.

# ಮಾದಕವಸ್ತು ಮಕ್ಕಳ ಭವಿಷ್ಯಕ್ಕೆ ಮಾರಕ : ಡಿಕೆಶಿ ಕಳವಳ

ಬೆಂಗಳೂರು, -ಮಾದಕ ವಸ್ತುಗಳು ಮುಂದಿನ ಪೀಳಿಗೆಯ ಮಕ್ಕಳ ಭವಿಷ್ಯಕ್ಕೆ ಮಾರಕವಾಗಲಿದೆ ಎಂದು ಕಳವಳ ವ್ಯಕ್ತಪಡಿಸಿರುವ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಮಾದಕ ವಸ್ತುಗಳಿಗೆ ಅಂತ್ಯವಾಡಲು ಮಕ್ಕಳು ಮತ್ತು ಯುವಕರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಕರೆ ಕೊಟ್ಟಿದ್ದಾರೆ.

ಬೇರೆ ರಾಜ್ಯಗಳಿಗೆ ಹೋಲಿಕೆ ಮಾಡಿದರೆ ನಮ್ಮ ರಾಜ್ಯದಲ್ಲಿ ಮಾದಕ ವಸ್ತು ನಿಯಂತ್ರಣಕ್ಕೆ ಕಡಿವಾಣ ಹಾಕಲಾಗಿದೆ. ಮಾದಕ ವಸ್ತು ಸೇವನೆ ಮಾಡಿದರೆ ಸಾವು ನೋವು ಹಾಗೂ ಯುವ ಜನಾಂಗದ ಭವಿಷ್ಯಕ್ಕೆ ಕಂಟಕವಾಗಲಿದೆ ಹೀಗಾಗಿ ಯುವ ಜನತೆ ಎಚ್ಚರಿಕೆ ವಹಿಸಬೇಕು ಎಂದು ಹೇಳಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಜಂಟಿಯಾಗಿ ವಿಧಾನಸೌಧದ ಮುಂಭಾಗದಲ್ಲಿ ಆಯೋಜಿಸಿದ್ದ ವಿಶ್ವ ಮಾದಕ ವಸ್ತು ದಿನದ ಪ್ರಯುಕ್ತ ಬೃಹತ್ ಕಾಲ್ನಡಿಗೆ ಜಾಥಾಗೆ ಚಾಲನೆ ನೀಡಿ ಮಾತನಾಡಿದ ಅವರು, ಮಾದಕ ವಸ್ತುಗಳು ನಮ್ಮ ಸಮಾಜಕ್ಕೆ ಕ್ಯಾನ್ಸರ್‌ನಂತೆ ರೋಗ ಅಂಟಿದೆ.

ಇದರಿಂದ ಸಮಾಜವನ್ನು ರಕ್ಷಿಸಿ ಆರೋಗ್ಯಕರ ಸಮಾಜವನ್ನು ನಿರ್ಮಾಣ ಮಾಡಬೇಕಾಗಿದೆ ಎಂದು ಹೇಳಿದರು.

ಮಕ್ಕಳು ಯುವಕರು ಈ ದೇಶದ ಆಸ್ತಿಯಾಗಿದ್ದು, ನಮ್ಮ ಸಂಸ್ಕೃತಿಯನ್ನು ಉಳಿಸಿಕೊಂಡು ವಿದ್ಯಾವಂತರಾಗಿ ಜಾಗತಿಕ ಮಟ್ಟದಲ್ಲಿ ಕೆಲಸ ಮಾಡುತ್ತಿದ್ದಾರೆ. ಇದ-ರಿಂದ ಬೆಂಗಳೂರಿಗೆ ವಿಶ್ವ ಮಟ್ಟದಲ್ಲಿ ಹೆಸರು ಪ್ರಾಪ್ತವಾಗಿದೆ ಎಂದು ತಿಳಿಸಿದರು.

ಬೆಂಗಳೂರಿನ ಮಕ್ಕಳು ವಿಶ್ವದ ಯಾವುದೇ ಉನ್ನತ ಹುದ್ದೆಗೆ ಏರಬಹುದು. ಮಕ್ಕಳು ಅಂದುಕೊಂಡಿದ್ದನ್ನು ಸಾಧಿಸಬೇಕಾದರೆ ಮಾದಕ ದ್ರವ್ಯ ದುಶ್ಚಟಗಳಿಂದ ದೂರ ಉಳಿಯಬೇಕು ಆಗ ಮಾತ್ರ ತಮ್ಮ ಗುರಿ ಮುಟ್ಟಲು ಸಾಧ್ಯ ಎಂದು ಹೇಳಿದರು.

ನಿಮ್ಮ ಸ್ನೇಹಿತರು ಅಥವಾ ಪರಿಚಯಸ್ಥರು ಯಾರಾದರೂ ಮಾದಕ ವ್ಯಸನಿಗಳಾದರೆ ಅವರನ್ನು ಪೊಲೀಸರು ಬಂಧಿಸಿ ನ್ಯಾಯಲಯದಲ್ಲಿ ಅವರಿಗೆ ಶಿಕ್ಷೆಯಾಗಲಿದೆ ಎಂಬ ಸಂದೇಶ ಕುರಿತು ಅರಿವು ಮೂಡಿಸುವ ಸಲುವಾಗಿ ಈ ದಿನವನ್ನು ಆಚರಿಸಲಾಗುತ್ತಿದೆ.

ಕಳೆದ 2 ವರ್ಷಗಳಲ್ಲಿ ಡ್ರಗ್ಸ್ ದಂಧೆಯಲ್ಲಿ ದೊಡ್ಡ ದೊಡ್ಡ ವ್ಯಕ್ತಿಗಳಲ್ಲಿ ಸಿಕ್ಕಿಬಿದ್ದು, ಯಾವ ರೀತಿ ಸಂಕಷ್ಟ ಅನುಭವಿಸಿದರು ಎಂಬುದನ್ನು ನೋಡಿದ್ದೀರಿ. ಇದಕ್ಕೆ ಅವಕಾಶ ಮಾಡಿಕೊಡಬೇಡಿ ಎಂದು ಮಕ್ಕಳಿಗೆ ಕಿವಿಮಾತು ಹೇಳಿದರು.

ಕಳೆದ 3 ವರ್ಷಗಳಿಂದ ಅನೇಕ ಪಾದಯಾತ್ರೆಗಳಲ್ಲಿ ಭಾಗವಹಿಸಿದ್ದೇನೆ. ನೀರಿಗಾಗಿ ನಡಿಗೆ, ಸ್ವಾತಂತ್ರ್ಯ ನಡಿಗೆ, ಭಾರತ್ ಜೋಡೋ ಯಾತ್ರೆಯಲ್ಲಿ ಹೆಜ್ಜೆ ಹಾಕಿದ್ದೇನೆ ಎಂದರು.

# ಅಕ್ಕಿ ಮೋದಿ ಕೊಟ್ಟಿದ್ದಲ್ಲ: ಲಾಡ್ ತಿರುಗೇಟು

ಧಾರವಾಡ, ಸದ್ಯ ಕೊಡುತ್ತಿರುವ ಪಡಿತರ ಅಕ್ಕಿ ಪ್ರಧಾನಿ ನರೇಂದ್ರ ಮೋದಿಯವರು ಕೊಟ್ಟಿದ್ದಲ್ಲ, ಅದು ಯು.ಪಿ.ಎ. ಅಕ್ಕಿ ಎಂದು ರಾಜ್ಯ ಕಾರ್ಮಿಕ ಖಾತೆ ಸಚಿವ ಸಂತೋಷ ಲಾಡ್ ಹೇಳಿದರು.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯುಪಿಎ ಸರ್ಕಾರದ ಅವಧಿಯಲ್ಲಿ ಆಹಾರ ಭದ್ರತಾ ಕಾಯ್ದೆ ತಂದಿದ್ದೇವೆ, ದೇಶದಲ್ಲಿ ಈ ಕಾಯ್ದೆ ಮೂಲಕ ಐದು ಕೆ.ಜಿ. ಅಕ್ಕಿ ಕೊಟ್ಟಿದ್ದೇವೆ. ಅದು ಮೋದಿ ಕೊಡುತ್ತಿರುವ ಅಕ್ಕಿ ಅಲ್ಲ ಎಂದು ಖಡಾಖಂಡಿತವಾಗಿ ನುಡಿದರು. 10 ಕೆ.ಜಿ. ಅಕ್ಕಿ ಕೊಡುತ್ತೇವೆಂದು ನಾವು ಹೇಳಿದ್ದು ಕೇಂದ್ರದ 5 ಕೆಜಿಗೆ ನಾವು 5 ಕೆಜಿ ಸೇರಿಸಿ ಒಟ್ಟು 10 ಕೆಜಿ ಎಂದು, ಅದರಂತೆ 10 ಕೆಜಿ ಕೊಟ್ಟೇಕೊಡುತ್ತೇವೆ ಎಂದು ಲಾಡ್ ತಿಳಿಸಿದರು.

ಮಹಾರಾಷ್ಟ್ರದಲ್ಲಿ ನಡೆದ ಕಾಂಗ್ರೆಸ್ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯನವರ ಭಾಷಣ ಕುರಿತಾದ ಪ್ರಶ್ನೆಗೆ ಉತ್ತರಿಸುತ್ತ, ಸಿದ್ಧರಾಮಯ್ಯ ಅಂದರೆ ಚಾಂಪಿಯನ್ ಎಂದು ಹೊಗಳಿದ ಸಚಿವರು, ಸಿದ್ಧರಾಮಯ್ಯನವರ ಜನಪ್ರಿಯತೆ ಹೆಚ್ಚಾಗುತ್ತಿದೆ ಮಹಾರಾಷ್ಟ್ರ ಅಷ್ಟೇಅಲ್ಲ ತಮಿಳ್ನಾಡಿಗೂ ಹೋಗಿ ಬಂದಿದ್ದಾರೆ ಎಂದು ನುಡಿದರು.



ನಾಳೆ ಧಾರವಾಡ ರೈಲು ನಿಲ್ದಾಣವನ್ನು ಪ್ರಧಾನಿ ಮೋದಿಯವರು ವರ್ಚ್ಯುವಲ್ ಮೂಲಕ ಉದ್ಘಾಟಿಸುತ್ತಿರುವ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಾದ ತಮಗೆ ಆಹ್ವಾನ ನೀಡದಿರುವುದಕ್ಕೆ ಆಕ್ರೋಶ ವ್ಯಕ್ತಪಡಿಸಿದ ಅವರು, ಮೋದಿ ರಾಷ್ಟ್ರಪತಿಗಳನ್ನೇ ಸೇರಿಸಿಕೊಳ್ಳುವುದಿಲ್ಲ, ಇನ್ನು ನಮ್ಮದೇನು ಇದು ಸರ್ವಾಧಿಕಾರಿ ಧೋರಣೆ ಎಂದು ಆಕ್ರೋಶ ಹೊರಹಾಕಿದರು.

# ಒಡಿಶಾ; ಭೀಕರ ಅಪಘಾತ 12 ಮಂದಿ ದುರ್ಮರಣ

ಭುವನೇಶ್ವರ(ಒಡಿಶಾ) - ಬಾಲಾಸೋರ್ ಬಳಿ ಭೀಕರ ರೈಲು ಅಪಘಾತ ಮಾಸುವ ಮುನ್ನವೇ ನಿನ್ನೆ ತಡರಾತ್ರಿ ರಾಜ್ಯದಲ್ಲಿ ಭೀಕರ ಬಸ್ ಅಪಘಾತ ಸಂಭವಿಸಿ ಒಂದೇ ಕುಟುಂಬದ 7 ಜನ ಸೇರಿದಂತೆ 12 ಮಂದಿ ಮೃತಪಟ್ಟಿದ್ದಾರೆ.

ಗಂಜಾಮ್ ಜಿಲ್ಲೆಯಲ್ಲಿ ಖಾಸಗಿ ಹಾಗೂ ಸರ್ಕಾರಿ ಬಸ್‌ಗಳು ಡಿಕ್ಕಿಯಾಗಿದ್ದು, ಖಾಸಗಿ ಬಸ್‌ನಲ್ಲಿದ್ದ ಒಂದೇ ಕುಟುಂಬದ 7 ಮಂದಿ ಸೇರಿ 12 ಜನ ಮೃತಪಟ್ಟಿದ್ದು 7 ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ. ಗಾಯಗೊಂಡವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದ್ದು ಅವರಲ್ಲಿ ಮೂವರು ಸಾವು ಬದುಕಿನ ನಡುವೆ ಹೋರಾಟ ನಡೆಸಿದ್ದಾರೆ. ದಿಗಪಹಂಡಿ ಪೊಲೀಸ್ ಠಾಣೆ ವ್ಯಾಪ್ತಿಯ ಬೆರ್ಹಾಂಪುರ್-ತಪ್ತಪಾಣಿ ರಸ್ತೆಯಲ್ಲಿ ಖಾಸಗಿ ಹಾಗೂ ಸರ್ಕಾರಿ ಬಸ್ ಡಿಕ್ಕಿಯಾಗಿದ್ದು, ಅಪಘಾತದ ರಭಸಕ್ಕೆ ಎರಡೂ ಬಸ್‌ಗಳು ಜಖಂಗೊಂಡಿವೆ. ಮೃತರೆಲ್ಲರೂ ಖಾಸಗಿ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದರು. ಇವರಲ್ಲಿ ಒಂದೇ ಕುಟುಂಬದ ಏಳು ಜನರಿದ್ದಾರೆ" ಎಂದು ಗಂಜಾಮ್ ಜಿಲ್ಲಾಧಿಕಾರಿ ದಿವ್ಯಜ್ಯೋತಿ ಪರಿದಾ ತಿಳಿಸಿದ್ದಾರೆ.





ಮೃತರೆಲ್ಲರೂ ಬೆರ್ಹಾಂಪುರದಲ್ಲಿ ಮದುವೆ ಮುಗಿಸಿಕೊಂಡು ತಮ್ಮ ಊರಿಗೆ ತೆರಳುತ್ತಿದ್ದರು. ಪಾರ್ಟಿ ಮುಗಿಸಿಕೊಂಡು ಊರಿಗೆ ತೆರಳುವಾಗ ಭೀಕರ ಅಪಘಾತ ಸಂಭವಿಸಿದೆ. ನಿದ್ರೆಯ ಮಂಪರಿನಲ್ಲಿದ್ದಾಗಲೇ ಅಪಘಾತ ಸಂಭವಿಸಿದ್ದು, ಯಾರಿಗೆ ಏನಾಗುತ್ತಿದೆ ಎಂಬಷ್ಟರಲ್ಲಿಯೇ ಪ್ರಾಣಪಕ್ಷಿ ಹಾರಿಹೋಗಿವೆ. ಅಪಘಾತ ಸಂಭವಿಸುತ್ತಲೇ ಪೊಲೀಸರು ಹಾಗೂ ಆಂಬ್ಯುಲೆನ್ಸ್‌ಗಳು ಕೂಡಲೇ ಸ್ಥಳಕ್ಕೆ ತೆರಳಿ ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ.

ಅಪಘಾತ ಸಂಭವಿಸಿದ ಸುದ್ದಿ ತಿಳಿಯುತ್ತಲೇ ಒಡಿಶಾ ಮುಖ್ಯಮಂತ್ರಿ ನವೀನ್ ಪಾಟ್ನಾಯಕ್ ಅವರು ಸಂತಾಪ ಸೂಚಿಸಿದ್ದಾರೆ.

ಹಾಗೆಯೇ, ಮೃತರ ಕುಟುಂಬಸ್ಥರಿಗೆ ತಲಾ 3 ಲಕ್ಷ ರೂಪಾಯಿ ಪರಿಹಾರ ಹಾಗೂ ಗಾಯಗೊಂಡವರಿಗೆ ಉಚಿತವಾಗಿ ಚಿಕಿತ್ಸೆ ನೀಡಲಾಗುವುದು ಎಂದು ಘೋಷಣೆ ಮಾಡಿದ್ದಾರೆ. ಗಾಯಾಳುಗಳ ಚಿಕಿತ್ಸೆಗಾಗಿ ಈಗಾಗಲೇ 30 ಸಾವಿರ ರೂಪಾಯಿಯನ್ನು ಬಿಡುಗಡೆ ಮಾಡಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಜೂನ್ 2ರಂದು ಒಡಿಶಾದ ಬಾಲಾಸೋರ್ ಜಿಲ್ಲೆಯಲ್ಲಿ ಭೀಕರ ರೈಲು ಅಪಘಾತ ಸಂಭವಿಸಿತ್ತು. ಬಹನಗ ರೈಲು ನಿಲ್ದಾಣದ ಬಳಿ ಮೂರು ರೈಲುಗಳು ಡಿಕ್ಕಿಯಾಗಿ 275 ಜನ ಮೃತಪಟ್ಟಿದ್ದರು. ಸಾವಿರಕ್ಕೂ ಅಧಿಕ ಮಂದಿ ಗಾಯಗೊಂಡಿದ್ದರು. ಈ ಭೀಕರ ಅಪಘಾತದ ನೆನಪುಗಳು ಮಾಸುವ ಮುನ್ನವೇ ಮತ್ತೊಂದು ಅಪಘಾತ ಸಂಭವಿಸಿದೆ.

# ಅರಣ್ಯ ಸಂರಕ್ಷಣೆ ನಿರ್ಲಕ್ಷಿಸಿದರೆ ಕಠಿಣ ಕ್ರಮ : ಖಂಡ್ರೆ ತಾಕೀತು

ಬೆಂಗಳೂರು, ಅರಣ್ಯ ಸಂರಕ್ಷಣಾ ಕೆಲಸದಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಜರುಗಿಸುವ ಎಚ್ಚರಿಕೆಯನ್ನು ಅರಣ್ಯ ಸಚಿವ ಈಶ್ವರ ಖಂಡ್ರೆ ನೀಡಿದ್ದಾರೆ.

ವಿಧಾನಸೌಧದಲ್ಲಿಂದು ಅರಣ್ಯ ಇಲಾಖೆಯ ನೂತನ ಲಾಂಛನವನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು, ಅರಣ್ಯ ನಾಶವನ್ನು ತಡೆಗಟ್ಟಿ ಅರಣ್ಯ ಮತ್ತು ವನ್ಯಜೀವಿಗಳನ್ನು ರಕ್ಷಿಸುವುದು ಅಧಿಕಾರಿಗಳ ಕೆಲಸ. ಈ ವಿಚಾರದಲ್ಲಿ ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ಎಚ್ಚರಿಕೆ ನೀಡಿದರು.

ಅರಣ್ಯಕ್ಕೆ ಎದುರಾಗುವ ಪ್ರಮುಖ ಆಪತ್ತು ಎಂದರೆ ಕಾಡ್ಗಿಚ್ಚು, ಈ ಕಾಡ್ಗಿಚ್ಚು ಉದ್ದೇಶಪೂರ್ವಕವಾದದ್ದೋ, ಸ್ವಾಭಾವಿಕಾವದದ್ದೋ ಎಂಬುದು ಮುಖ್ಯವಾಗುತ್ತದೆ. ಕೆಲವೆಡೆ ಮರ ಕಡಿದು ಬುಡಕ್ಕೆ ಬೆಂಕಿ ಹಚ್ಚಿ ಜೆಸಿಬಿಯಿಂದ ಭೂಮಿ ಮಟ್ಟ ಮಾಡಿ ಅರಣ್ಯ ಕಬಳಿಸಲಾಗುತ್ತದೆ ಎಂಬ ಆರೋಪಗಳಿವೆ. ಈ ಬಗ್ಗೆ ಕಟ್ಟೆಚ್ಚರ ವಹಿಸಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಾನವ ಮತ್ತು ವನ್ಯ ಮೃಗಗಳ ಸಂಘರ್ಷ ಇತ್ತೀಚಿನ ದಿನಗಳಲ್ಲಿ ದೊಡ್ಡ ಸವಾಲಾಗಿದೆ. ಕಳೆದ ಸಾಲಿನಲ್ಲಿ ವನ್ಯ ಮೃಗಗಳ ದಾಳಿಯಿಂದ 59 ಜನ ಮೃತಪಟ್ಟಿದ್ದಾರೆ. ಇದರಲ್ಲಿ ಹೆಚ್ಚು ಸಾವುಗಳ ಆನೆ ದಾಳಿಯಿಂದ ಆಗಿವೆ. ಹಾಗಾಗಿ ವನ್ಯಮೃಗ ಮತ್ತು ಮಾನವ ಸಂಘರ್ಷ ತಡೆಯಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅವರು ಹೇಳಿದರು.

ಅರಣ್ಯ ಇಲಾಖೆಯ ಅಧಿಕಾರಿಗಳು ಜನಪರ ಕಾಳಜಿಯಿಂದ ಕಾರ್ಯನಿರ್ವಹಿಸಬೇಕು. ಕೆಲಸದಲ್ಲಿ ನಿರ್ಲಕ್ಷ್ಯ ತೋರಿದರೆ ಶಿಸ್ತು ಕ್ರಮ ಜರುಗಿಸುವುದಾಗಿಯೂ ಅವರು ಹೇಳಿದರು.

ಕಾಂಪಾ ನಿಧಿಯನ್ನು ಬಳಸಿಕೊಂಡು ಆನೆಗಳು ನಾಡಿಗೆ ಬರುವುದನ್ನು ತಡೆಯಲು ತಡೆಗೋಡೆ ನಿರ್ಮಿಸುವ ಉದ್ದೇಶ ಹೊಂದಿದ್ದೇವೆ. ರೈಲ್ವೆ ಕಂಬಿಗಳನ್ನು ಬಳಸಿಕೊಂಡು ಬ್ಯಾರಿಕೇಡ್‌ಗಳನ್ನು ನಿರ್ಮಿಸುವ ಕೆಲಸ ನಡೆದಿದೆ. ಸುಮಾರು 614 ಕಿ.ಮೀ. ರೈಲ್ವೆ ಬ್ಯಾರಿಕೇಡ್ ಯೋಜನೆ ರೂಪಿಸಲಾಗಿದ್ದು, ಇದರಲ್ಲಿ 310 ಕಿ.ಮಿ. ಪೂರ್ಣವಾಗಿದೆ. ಉಳಿದ ಕಾಮಗಾರಿಗಳಿಗೆ ಹೆಚ್ಚಿನ ಹಣ ಕೋರಲಾಗಿದೆ. 1 ಕಿಮೀ. ರೈಲ್ವೆ ಬ್ಯಾರಿಕೇಡ್ ನಿರ್ಮಿಸಲು ಒಂದೂವರೆ ಕೋಟಿ ರೂ. ವೆಚ್ಚವಾಗುತ್ತದೆ ಎಂದರು.

### ಹೊಸ ಲಾಂಛನ, ಹೊಸ ಹುರುಪು

ಅರಣ್ಯ ಇಲಾಖೆಗೆ ಕಾಯಕಲ್ಪ ನೀಡಿ ಇಲಾಖೆ ಹೆಚ್ಚು ಹುರುಪಿನಿಂದ ಕೆಲಸ ಮಾಡಲು ಲಾಂಛನ ರೂಪಿಸಿ ಬಿಡುಗಡೆ ಮಾಡಲಾಗಿದೆ ಎಂದರು.

ಅರಣ್ಯ ಇಲಾಖೆಗೆ ಇದುವರೆಗೂ ತನ್ನದೇ ಆದ ಸ್ವಂತ ಲಾಂಛನ ಇರಲಿಲ್ಲ. ಇಲಾಖೆಯ ಉದ್ದೇಶ ಮತ್ತು ಕಾರ್ಯವನ್ನು ಪ್ರತಿನಿಧಿಸುವ ರೀತಿಯಲ್ಲಿ ಲಾಂಛನವನ್ನು ರೂಪಿಸಲಾಗಿದೆ. ಈ ಲಾಂಛನ ಜನರಲ್ಲಿ ಅರಣ್ಯ ಇಲಾಖೆ ಬಗ್ಗೆ ಹೆಮ್ಮೆ ಮೂಡಿಸಲು ನೆರವಾಗಲಿದೆ ಎಂಬ ವಿಶ್ವಾಸವನ್ನು ಅವರು ವ್ಯಕ್ತಪಡಿಸಿದರು.

ಲಾಂಛನ ರೂಪಿಸುವ ಸಂಬಂಧ ವಿದ್ಯಾರ್ಥಿಗಳು, ಕಲಾವಿದರು ಮತ್ತು ಸಾರ್ವಜನಿಕರಿಗೆ ಸ್ಪರ್ಧೆ ಆಯೋಜಿಸಲಾಗಿತ್ತು. ಒಟ್ಟು 309 ಲಾಂಛನ ವಿನ್ಯಾಸಗಳು ಬಂದಿದ್ದವು. ಇವೆಲ್ಲವನ್ನು ಪರಿಶೀಲಿಸಲು ಸಮಿತಿ ಮಾಡಿದ್ದವು ಸಮಿತಿ ಅಂತಿಮಗೊಳಿಸಿದ ಲಾಂಛನವನ್ನು ಆಯ್ಕೆ ಮಾಡಲಾಗಿದೆ. ಎಂದರು

ಲಾಂಛನ ಸ್ಪರ್ಧೆಯಲ್ಲಿ ವಿಜೇತರಾದ ಮೈಸೂರಿನ ಶಮಂತ ಗೊರೂರು ಅವರಿಗೆ ಇದೇ ಸಂದರ್ಭದಲ್ಲಿ ಸಚಿವರು 20 ಸಾವಿರ ರೂ.ಗಳ ನಗದು ಬಹುಮಾನವನ್ನು ಬಿಡುಗಡೆ




ವಿಧಾನಸೌಧದ ಸಭಾಂಗಣದಲ್ಲಿ ಇಂದು ನಡೆದ ಕಾರ್ಯಕ್ರಮದಲ್ಲಿ ಅರಣ್ಯ ಇಲಾಖೆಯ ಲೋಗೋವನ್ನು ಸಚಿವ ಈಶ್ವರ್ ಖಂಡ್ರೆ ರವರು ಬಿಡುಗಡೆ ಮಾಡಿದರು. ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಉಚಿತ ವಿದ್ಯುತ್: ಗೃಹಜ್ಯೋತಿ ಯೋಜನೆಗೆ 51 ಲಕ್ಷಕ್ಕೂ ಹೆಚ್ಚು ಗ್ರಾಹಕರು ನೋಂದಣಿ



**ಬೆಂಗಳೂರು:** ರಾಜ್ಯ ಸರ್ಕಾರದ ಐದು ಗ್ಯಾರಂಟಿಗಳಲ್ಲಿ ಒಂದಾದ ಗೃಹಜ್ಯೋತಿ ಯೋಜನೆ ಅಡಿ ಉಚಿತ ವಿದ್ಯುತ್ ಗೆ ನೋಂದಣಿ ಮಾಡಿಸಿಕೊಳ್ಳುವವರ ಸಂಖ್ಯೆ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದ್ದು, ಭಾನುವಾರ ನೋಂದಣಿ ಮಾಡಿಕೊಂಡ ಗ್ರಾಹಕರ ಸಂಖ್ಯೆ 51 ಲಕ್ಷ ದಾಟಿದೆ ಎಂದು ಇಂಧನ ಇಲಾಖೆ ತಿಳಿಸಿದೆ.ಸರ್ವರ್ ಸಮಸ್ಯೆ ನಡುವೆ ಯೂ ಗೃಹ ಜ್ಯೋ?ತಿ ಯೋಜನೆಗೆ ಕಳೆದ ಏಳು ದಿನಗಳಲ್ಲಿ ಒಟ್ಟು 51,17,692 ಲಕ್ಷ ಗ್ರಾಹಕರು ನೋಂದಣಿ ಮಾಡಿ ಕೊಂಡಿದ್ದಾರೆ.

ಈ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಲಾಗಿದ್ದು, ಗೃಹ ಜ್ಯೋತಿ ನೋಂದಣಿಯು ಇನ್ನಷ್ಟು ವೇಗ ಪಡೆದುಕೊಂಡಿದ್ದು, ಭಾನುವಾರ ರಾತ್ರಿ 8 ಗಂಟೆವರೆಗೆ 51,17,692 ಗ್ರಾಹಕರು ನೋಂದಣಿ ಮಾಡಿಕೊಂಡಿದ್ದಾರೆ ಎಂದು ಇಂಧನನ ಇಲಾಖೆ ತಿಳಿಸಿದೆ.ಇ-ಆಡಳಿತ ಇಲಾಖೆ ಪ್ರತ್ಯೇಕ ನೋಂದಣಿ ಲಿಂಕ್ ಅನ್ನು ರಾಜ್ಯದ 2,000 ವಿದ್ಯುಚ್ಛಕ್ತಿ ಕಚೇರಿಗಳಿಗೆ ನೀಡಿದ ನಂತರ ನೋಂದಣಿ ಪ್ರಕ್ರಿಯೆ ವೇಗ ಪಡೆದು ಕೊಂಡಿದ್ದು, ಶುಕ್ರವಾರ (ಜೂನ್ 23) 10,93, 606 ಗ್ರಾಹಕರು ನೋಂದ ಣಿ ಮಾಡಿಕೊಂಡಿದ್ದರು. ಶನಿವಾ ರ(ಜೂನ್ 24) ಸಂಜೆ 8 ಗಂಟೆ ಯವರೆಗೆ 11,17,208 ಗ್ರಾಹ ಕರು ಯೋಜನೆಗೆ ನೋಂದಣಿ ಮಾಡಿ ಕೊಂಡಿದ್ದಾರೆ.

# ಅನ್ನಭಾಗ್ಯ ಯೋಜನೆ: ರಾಜ್ಯಕ್ಕೆ ಅಕ್ಕಿ ನೀಡಲು 3 ಕೇಂದ್ರೀಯ ಸಂಸ್ಥೆಗಳ ತಾತ್ವಿಕ ಒಪ್ಪಿಗೆ



**ಬೆಂಗಳೂರು:** ಅನ್ನಭಾಗ್ಯ ಯೋಜನೆ ಘೋಷಣೆ ಮಾಡಿ ಅಕ್ಕಿ ಸಿಗದೆ ಸಂಕಷ್ಟಕ್ಕೆ ಸಿಲುಕಿದ್ದ ರಾಜ್ಯದ ಆಡಳಿತಾರೂಢ ಕಾಂಗ್ರೆಸ್ ಸರ್ಕಾರಕ್ಕೆ ನೆರವು ನೀಡಲು 3 ಕೇಂದ್ರೀಯ ಸಂಸ್ಥೆಗಳು ಮುಂದೆ ಬಂದಿವೆ.

ಕೇಂದ್ರೀಯ ಸ್ವಾಮ್ಯದ ಮೂರು ಸಂಸ್ಥೆಗಳಾದ ರಾಷ್ಟ್ರೀಯ ಗ್ರಾಹಕರ ಸಹಕಾರ ಒಕ್ಕೂಟ (ಎನ್ ಸಿಸಿಎಫ್), ರಾಷ್ಟ್ರೀಯ ಕೃಷಿ ಸಹಕಾರ ಮಾರುಕಟ್ಟೆ ಮಹಾ ಮಂಡಳ (ನಾಫೆಡ್) ಮತ್ತು ಭಾರತೀಯ ಆಹಾರ ನಿಗಮ (ಎಫ್ ಸಿಐ) ರಾಜ್ಯ ಸರ್ಕಾರಕ್ಕೆ ಅಕ್ಕಿ ನೀಡಲು ತಾತ್ವಿಕ ಒಪ್ಪಿಗೆ ನೀಡಿವೆ ಎಂದು ತಿಳಿದುಬಂದಿದೆ.

ಆದರೆ, ಮೂರು ಸಂಸ್ಥೆಗಳ ಅಕ್ಕಿಯ ದರ ಬಲು ದುಬಾರಿಯಾಗಿದ್ದು, ಸಾಗಾಣಿಕೆ ವೆಚ್ಚ ಸೇರಿ ಪ್ರತಿ ಕೆ.ಜಿ ಗೆ 40 ರೂ. ಅಧಿಕ ದಾಟುವ ಸಾಧ್ಯತೆ ಎಂದು ಹೇಳಲಾಗುತ್ತಿದೆ. ಇದು ಈಅಖ ಪೂರೈಕೆ ಮಾಡುತ್ತಿದ್ದ ದರಕ್ಕಿಂತ ಹೆಚ್ಚಾಗಲಿದೆ ಎನ್ನಲಾಗಿದೆ.

ಶನಿವಾರವಷ್ಟೇ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್.ಮುನಿಯಪ್ಪ ನೇತೃತ್ವದಲ್ಲಿ ಉನ್ನತ ಮಟ್ಟದ ಸಭೆ ನಡೆಯಿತು. ಸಭೆಯಲ್ಲಿ ಕೇಂದ್ರೀಯ ಸಂಸ್ಥೆಗಳ ಅಧಿಕಾರಿಗಳು ಭಾಗಿಯಾಗಿದ್ದರು.

ಮಾತುಕತೆ ವೇಳೆ ಪ್ರತಿ ಕೆಜಿಗೆ ರೂ.34ರಂತೆ ಅಕ್ಕಿ ಖರೀದಿ ಮಾಡಲು ಸರ್ಕಾರ ಒಪ್ಪಿಗೆ ಸೂಚಿಸಿದೆ. ಆದರೆ, ರಾಜ್ಯ ಸರ್ಕಾ ರವೇ ಸಾರಿಗೆ ವೆಚ್ಚವನ್ನು ಭರಿಸಬೇಕಾಗಿದ್ದು, ಏಜೆನ್ಸಿಗಳಿಗೆ ಸುಮಾರು 1 ಪ್ರತಿಶತದಷ್ಟು ಕಮಿಷನ್ ಅನ್ನು ಪಾವತಿಸಬೇಕಾಗುತ್ತದೆ ಎಂದು ಮೂಲಗಳು ತಿಳಿಸಿವೆ.

ಈ ಸಭೆಗೂ ಮುನ್ನ ಸಚಿವ ಮುನಿಯಪ್ಪ ಅವರು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿತ ವಿತರಣಾ ಸಚಿವ ಪಿಯೂಷ್ ಗೋಯಲ್ ಅವರನ್ನು ದೆಹಲಿಯಲ್ಲಿ ಭೇಟಿ ಮಾಡಿ, ಅನ್ನಭಾಗ್ಯ ಯೋಜನೆಗೆ ಅಕ್ಕಿ ಒದಗಿಸುವಂತೆ ಮನವಿ ಮಾಡಿಕೊಂಡಿದ್ದರು. ಆದರೆ, ಇದಕ್ಕೆ ಕೇಂದ್ರ ಸರ್ಕಾರ ಒಪ್ಪಿಗೆ ನೀಡಿರಲಿಲ್ಲ.

# ಅಹಲ್ಯಾದೇವಿ ಹೋಳ್ಕರ್‌ರ 298ನೇ ಜನ್ಮದಿನಾಚರಣೆ ಇಂದೋರ್‌ನಲ್ಲಿ ಕನ್ನಡದಲ್ಲಿಯೇ ಭಾಷಣ ಮಾಡಿದ ಸಿದ್ದರಾಮಯ್ಯ



**ಬಾರಾಮತಿ:** ಮಹಿಳೆಯರಿಗೆ ಶಿಕ್ಷಣ ನೀಡಿ ಆರ್ಥಿಕವಾಗಿ ಸ್ವಾವಲಂಬಿ ಯಾಗುವಂತೆ ಮಾಡುವುದು ಇಂದೋರ್ ರಾಜ್ಯದ 18ನೇ ಶತ ಮಾನದ ಪೌರಾಣಿಕ ಆಡಳಿತಗಾರ್ತಿ ಅಹಲ್ಯಾದೇವಿ ಹೋಳ್ಕರ್ ಅವರಿಗೆ ಸಲ್ಲಿಸುವ ನಿಜವಾದ ಗೌರವ ಎಂದು ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಭಾನುವಾರ ಹೇಳಿ ದ್ದಾರೆ.

ಹೋಳ್ಕರ್ ಅವರ 298ನೇ ಜನ್ಮದಿನಾಚರಣೆ ಅಂಗವಾಗಿ ಪುಣೆ ಜಿಲ್ಲೆಯ ಬಾರಾಮತಿ ಪಟ್ಟಣದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಅವರು ಮಾತನಾಡಿದರು.

ಕನ್ನಡದಲ್ಲಿಯೇ ಭಾಷಣ ಮಾಡಿದ ಸಿದ್ದರಾಮಯ್ಯ ಅವರು, ಹೋಳ್ಕರ್ ಅವರ ಜೀವನ ಮತ್ತು ಸಮಯವನ್ನು ನೆನಪಿಸಿಕೊಂಡರು. ಮಹಿಳೆಯರಿಗೆ ಶಿಕ್ಷಣ ನೀಡಿ ಆರ್ಥಿಕವಾಗಿ ಸ್ವಾವಲಂಬಿಗ ಳನ್ನಾಗಿ ಮಾಡುವುದೇ ಅಹಲ್ಯಾದೇವಿ ಹೋಳ್ಕರ್ ಅವರಿಗೆ ಸಲ್ಲಿಸುವ ನಿಜವಾದ ಶ್ರದ್ಧಾಂಜಲಿ ಎಂದರು.

'ಕರ್ನಾಟಕದಾದ್ಯಂತ ಮಹಿಳೆ ಯರಿಗೆ ಉಚಿತ ಬಸ್ ಪ್ರಯಾಣ ವನ್ನು ಘೋಷಿಸುವ ಮೂಲಕ ಈ ಗುರಿಯನ್ನು ಸಾಧಿಸಲು ನಾವು ಕೆಲವು ಕ್ರಮಗಳನ್ನು ತೆಗೆದುಕೊಂ ಡಿದ್ದೇವೆ. ಅಲ್ಲದೆ, ಕುಟುಂಬದ ಮುಖ್ಯಸ್ಥೆಯಾಗಿರುವ ಮಹಿಳೆಯರ ಬ್ಯಾಂಕ್ ಖಾತೆಗೆ ತಿಂಗಳಿಗೆ 2,000 ರೂ. ಹಾಕುತ್ತೇವೆ ಎಂದರು.

ಕರ್ನಾಟಕ ಸಿಎಂ ಅವರು ಪ್ರಮಾಣ ವಚನ ಸ್ವೀಕರಿಸಿದ 24 ಗಂಟೆಗಳಲ್ಲಿ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ ಭರವಸೆಯನ್ನು ಜಾರಿಗೆ ತಂದರು. ಆದರೆ, ಈ ವರ್ಷ ಆಗಸ್ಟ್ 15 ರಿಂದ ತಿಂಗಳಿಗೆ 2,000 ರೂ. ಖಾತೆಗೆ ಹಾಕುವ ಭರವಸೆ ನೀಡಿದ್ದಾರೆ.

ಮಹಾರಾಷ್ಟ್ರದಲ್ಲಿ ಮುಂದಿನ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಮತ್ತು ನ್ಯಾಶನಲಿಸ್ಟ್ ಕಾಂಗ್ರೆಸ್ ಪಕ್ಷ (ಎನ್‌ಸಿಪಿ) ಜಯಗಳಿಸಲಿದೆ ಎಂದ ಅವರು, ರಾಜ್ಯದಲ್ಲಿ ಮಹಿಳೆಯರಿಗೆ ಈ ಯೋಜ ನೆಗಳನ್ನು ಜಾರಿಗೊಳಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಎನ್‌ಸಿಪಿ ಮುಖ್ಯಸ್ಥ ಶರದ್ ಪವಾರ್, ಅವರ ಪುತ್ರಿ ಮತ್ತು ಪಕ್ಷದ ಕಾರ್ಯಾಧ್ಯಕ್ಷೆ ಸುಪ್ರಿಯಾ ಸುಳೆ, ಮಹಾರಾಷ್ಟ್ರ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಅಜಿತ್ ಪವಾರ್ ಮತ್ತು ಹಿರಿಯ ಕಾಂಗ್ರೆಸ್ ನಾಯಕ ಬಾಳಾಸಾಹೇಬ್ ಥೋರಟ್ ಉಪಸ್ಥಿತರಿದ್ದರು.

# ನಿವೇಶನ ನೀಡುವುದಾಗಿ ನಂಬಿಸಿ ನಟ ಮಾಸ್ಟರ್ ಆನಂದ್‌ಗೆ ವಂಚಿಸಿದ ಖಾಸಗಿ ಕಂಪನಿ; ದೂರು ದಾಖಲು!



**ಬೆಂಗಳೂರು:** ನಿವೇಶನ ಕೊಡಿಸುವುದಾಗಿ ನಂಬಿಸಿ ರಿಯಲ್ ಎಸ್ಟೇಟ್ ಸಂಸ್ಥೆಯ ಮಾಲೀಕ ಹಾಗೂ ಮತ್ತೊಬ್ಬ ವ್ಯಕ್ತಿಯು 18.5 ಲಕ್ಷ ರೂಪಾಯಿ ವಂಚಿಸಿದ್ದಾರೆ ಎಂದು ಕನ್ನಡದ ನಟ ಮಾಸ್ಟರ್ ಆನಂದ್ ಹೆಚ್ ಪೊಲೀಸರಿಗೆ ದೂರು ನೀಡಿದ್ದಾರೆ.

ಮಲ್ಟಿ ಲೀಪ್ ವೆಂಚರ್ಸ್ ಪ್ರೈವೇಟ್ ಲಿಮಿಟೆಡ್ ಮಾಲೀಕ ಸುಧೀರ್ ಎಸ್ ಮತ್ತು ಅವರ ಆಪ್ತ ಸಹಾಯಕಿ ಮಣಿಕಾ ಕೆಎಂ ವಿರುದ್ಧ ನಟ ಮಾಸ್ಟರ್ ಆನಂದ್ ಜೂನ್ 23 ರಂದು ಚಂದ್ರಾ ಲೇಔಟ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಕೆಂಗೇರಿಯ ಕೊಮ್ಮಘಟ್ಟದಲ್ಲಿ ಗೇಟೆಡ್ ಕಮ್ಯುನಿಟಿಯಲ್ಲಿ ನಿವೇಶನ ನೀಡುವುದಾಗಿ ಭರವಸೆ ನೀಡಿದ್ದು, ಮುಂಗಡವಾಗಿ 18.5 ಲಕ್ಷ ರೂ. ಪಾವತಿಸಿರುವುದಾಗಿ ಆನಂದ್ ಹೇಳಿದ್ದಾರೆ.

ಎಫ್‌ಐಆರ್ ಪ್ರಕಾರ, ಆನಂದ್ ಅವರು ಜುಲೈ 2020 ರಲ್ಲಿ ಚಲನಚಿತ್ರ ಚಿತ್ರೀಕರಣಕ್ಕಾಗಿ ಕೊಮ್ಮಘಟ್ಟದ ರಾಮಸಂದ್ರಕ್ಕೆ ಭೇಟಿ ನೀಡಿದಾಗ 'ಮಾರಾಟಕ್ಕಿವೆ' ಎಂಬ ಫಲಕಗಳೊಂದಿಗೆ ಖಾಲಿ ನಿವೇಶನಗಳನ್ನು ನೋಡಿದ್ದಾರೆ.

ಈ ವೇಳೆ ಅವರ ವಿಚಾರಣೆಗೆ ಪ್ರತಿಕ್ರಿಯೆಯಾಗಿ, ಸಂಸ್ಥೆಯ ಮಾರ್ಕೆಟಿಂಗ್ ಕಛೇರಿಯಲ್ಲಿ ಮಣಿಕಾ ಮತ್ತು ಸುಧೀರ್ ಎಂಬುವವರು ಆನಂದ್ ಅವರಿಗೆ ಎಲ್ಲಾ ವಿವರಗಳನ್ನು ನೀಡಿದ್ದಾರೆ ಮತ್ತು ಕೊಡುಗೆಗಳನ್ನು ವಿವರಿಸಿದ್ದಾರೆ. ಆನಂದ್ ತಾನು ಈ ಬಗ್ಗೆ ನಿರ್ಧಾರ ತೆಗೆದುಕೊಂಡು ಹಿಂದಿರುವುದಾಗಿ ತಿಳಿಸಿ ಅಲ್ಲಿಂದ ಹೊರಟಿದ್ದಾರೆ.

ಆದರೆ, ಮಣಿಕಾ ಮತ್ತು ಸುಧೀರ್ ಅವರಿಗೆ ಕರೆ ಮಾಡಿ ಅತ್ಯಾಕರ್ಷಕ ಸಾಲ ಯೋಜನೆಗಳ ಆಮಿಷ ಒಡ್ಡಿದ್ದಾರೆ. ಈ ಆಫರ್‌ನಿಂದ ಆಕರ್ಷಿತರಾದ ಅವರು ನಿವೇಶನ ಖರೀದಿಸಲು ಒಪ್ಪಿಕೊಂಡಿದ್ದಾರೆ. ಮಾತುಕತೆಯ ನಂತರ 70 ಲಕ್ಷ ರೂ.ಗೆ ಒಪ್ಪಂದವನ್ನು ಅಂತಿಮಗೊಳಿ ಸಲಾಯಿತು ಮತ್ತು ಖರೀದಿ ಕರಾರು ಪತ್ರವನ್ನು ನೀಡಲಾಯಿತು.

ಸೆಪ್ಟೆಂಬರ್ 2020 ಮತ್ತು ನವೆಂಬರ್ 2020 ರ ನಡುವೆ, ನಟ ಅವರಿಗೆ ನಾಲ್ಕು ಕಂತುಗಳಲ್ಲಿ 18.5 ಲಕ್ಷ ರೂ. ನೀಡಿದ್ದಾರೆ.

ಒಪ್ಪಂದದಲ್ಲಿ ನಮೂದಿಸಿರುವ ಬಾಕಿ ಪಾವತಿಗೆ ಸುಧೀರ್ ಅವರು ಸಾಲ ಮಂಜೂರು ಮಾಡುವುದನ್ನೇ ಅವರು ಕಾಯುತ್ತಿದ್ದರು.

ಆದರೆ, ಸುಧೀರ್ ಸಾಲ ಕೊಡಿಸುವಲ್ಲಿ ವಿಫಲರಾಗಿದ್ದಾರೆ. ನಂತರ ಆ ನಿವೇಶನವನ್ನು ಬೇರೆಯವರಿಗೆ ಮಾರಾಟ ಮಾಡಿರುವುದು ತಿಳಿದುಬಂದಿದೆ ಎಂದು ಆನಂದ್ ಆರೋಪಿಸಿ ದ್ದಾರೆ.

ಪೊಲೀಸರು ಐಪಿಸಿಯ ವಿವಿಧ ಸೆಕ್ಷನ್‌ಗಳು ಮತ್ತು ನಿಯಂತ್ರಿತ ಠೇವಣಿ ಯೋಜನೆಗಳ ನಿಷೇಧ ಕಾಯ್ದೆ, 2019 ರ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ ಮತ್ತು ತನಿಖೆಯನ್ನು ಪ್ರಾರಂಭಿಸಿದ್ದಾರೆ.

# ಕೆಲಸ ಹೇಗೆ ನಡೆಯುತ್ತಿದೆ, ದೇಶದಲ್ಲಿ ಏನಾಗುತ್ತಿದೆ' ದೆಹಲಿಗೆ ಬಂದಿಳಿದ ಕೂಡಲೇ ಬಿಜೆಪಿ ನಾಯಕರನ್ನು ಕೇಳಿ ತಿಳಿದುಕೊಂಡ ಪ್ರಧಾನಿ ಮೋದಿ



**ನವದೆಹಲಿ:** ಅಮೆರಿಕ ಮತ್ತು ಈಜಿಪ್ಟ್ ದೇಶಗಳ ಪ್ರವಾಸ ಯಶಸ್ವಿಯಾಗಿ ಮುಗಿಸಿಕೊಂಡು ಪ್ರಧಾನ ಮಂತ್ರಿ ನರೇಂದ್ರ ಮೋದಿ(PM Narendra Modi) ಇಂದು ಸೋಮವಾರ ನಸುಕಿನ ಜಾವ ದೆಹಲಿಗೆ ಬಂದಿಳಿದರು.

ಅವರನ್ನು ಬಿಜೆಪಿ ರಾಷ್ಟ್ರಾಧ್ಯಕ್ಷ ಜೆ ಪಿ ನಡ್ಡಾ, ದೆಹಲಿಯ ಬಿಜೆಪಿ ಮುಖ್ಯಸ್ಥ ವೀರೇಂದ್ರ ಸಚ್‌ದೇವ್, ದೆಹಲಿಯ ಬಿಜೆಪಿ ಸಂಸದರು, ವಿದೇಶಾಂಗ ಇಲಾಖೆ ರಾಜ್ಯ ಸಚಿವೆ ಮೀನಾಕ್ಷಿ ಲೇಖಿ ಮೊದಲಾದವರು ವಿಮಾನ ನಿಲ್ದಾಣದಲ್ಲಿ ಬರಮಾ ಡಿಕೊಂಡರು.

ಅಮೆರಿಕ ಮತ್ತು ಈಜಿಪ್ಟ್ ದೇಶಗಳ ಪ್ರವಾಸ ವೇಳೆ ಪ್ರಧಾನಿಯವರು ಅಪಾರ ಜನಪ್ರಿಯತೆ ಗಳಿಸಿದ್ದು ಮಾತ್ರವಲ್ಲದೆ ವ್ಯಾಪಾರ, ಆಹಾರ ಭದ್ರತೆ, ತಂತ್ರಜ್ಞಾನ ಮತ್ತು ರಕ್ಷಣಾ ಕ್ಷೇತ್ರಗಳಲ್ಲಿ ಹಲವು ಪ್ರಯೋಜನಗಳು ಆಗಿವೆ.

ಪ್ರವಾಸ ಮುಗಿಸಿ ಬಂದಿರುವ ಪ್ರಧಾನಿಯವರು ಇಂದು ವಿಶ್ರಾಂತಿ ತೆಗೆದುಕೊಳ್ಳುತ್ತಿಲ್ಲ. ಬದಲಿಗೆ ಹಲವು ಪ್ರಮುಖ ಸಭೆಗಳು, ಪರಾಮರ್ಶೆ ಸಭೆಗಳಲ್ಲಿ ಭಾಗಿಯಾಗುತ್ತಿದ್ದಾರೆ.

ಭಾರತದಲ್ಲಿ ಏನು ನಡೆಯುತ್ತಿದೆ: ವಿಮಾನ ನಿಲ್ದಾಣದಲ್ಲಿ ಬಂದಿಳಿಯುತ್ತಿದ್ದಂತೆ ಬಿಜೆಪಿ ನಾಯಕರು ಅವರನ್ನು ಗುಲಾಬಿ ನೀಡಿ ಸ್ವಾಗತಿಸಿದರು. ಆಗ ಭಾರತದಲ್ಲಿ ಏನು ನಡೆಯುತ್ತಿದೆ, ಏನಾಗುತ್ತಿದೆ ಎಂದು ಮೋದಿಯವರು ಕೇಳಿದ್ದಾರೆ.

ಅವರು ವಿಮಾನದಲ್ಲಿ ಕೆಳಗಿಳಿಯುತ್ತಿದ್ದಂತೆ ನಮ್ಮನ್ನು ಕೇಳಿದ ಮಾತು ನಾವೆಲ್ಲಾ ಹೇಗೆ ಕೆಲಸ ಮಾಡುತ್ತಿದ್ದೇವೆ ಮತ್ತು ದೇಶದಲ್ಲಿ ಏನಾಗುತ್ತಿದೆ ಎಂದು ದೆಹಲಿಯ ಸಂಸದರೊಬ್ಬರು ಹೇಳಿದರು.

ಕೇಂದ್ರದಲ್ಲಿ ಮೋದಿ ಸರ್ಕಾರ 9 ವರ್ಷ ಆಡಳಿತ ನಡೆಸಿದ ಅಂಗವಾಗಿ ಬಿಜೆಪಿ ಒಂದು ತಿಂಗಳ ಕಾರ್ಯಕ್ರಮ ಹಮ್ಮಿಕೊಂಡಿದ್ದು ಸುಶಾನ್ ಮತ್ತು ಸೇವಾ ಎಂಬ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಜನರ ಬೆಳವಣಿಗೆ ಮತ್ತು ಅಭಿವೃದ್ಧಿಗಾಗಿ ಕೆಲಸ ಮಾಡುತ್ತಿದೆ. ಬಿಜೆಪಿ ರಾಷ್ಟ್ರಾಧ್ಯಕ್ಷ ನಡ್ಡಾ ಅವರನ್ನು ಪಕ್ಷದ ನಾಯಕರು ಜನರನ್ನು ಹೇಗೆ ತಲುಪುತ್ತಿದ್ದಾರೆ ಎಂದು ಕೇಳಿ ತಿಳಿದುಕೊಂಡರು.

ಸರ್ಕಾರದ ರಿಪೋರ್ಟ್ ಕಾರ್ಡು ಜನರನ್ನು ತಲು ಪುತ್ತಿದೆಯೇ ಎಂದು ಕೇಳಿದರು. ಅಲ್ಲದೆ ಜೆ ಪಿ ನಡ್ಡಾ ಅವರ ತೆಲಂಗಾಣ ಭೇಟಿಯ ಬಗ್ಗೆ ಸಹ ಪ್ರಧಾನ ಮಂತ್ರಿಗಳು ಕೇಳಿ ತಿಳಿದು ಕೊಂಡ'ರು ಎಂದು ಬಿಜೆಪಿ ಸಂಸದ ಮನೋಜ್ ತಿವಾರಿ ಸುದ್ದಿಗಾರರಿಗೆ ತಿಳಿಸಿದರು.


# ಬೆಂಗಳೂರಿನಲ್ಲಿ ಹಿಟ್ ಆ್ಯಂಡ್ ರನ್‌ಗೆ ವ್ಯಕ್ತಿ ಬಲಿ




**ಬೆಂಗಳೂರು :** ಕಾರು ಡಿಕ್ಕಿಯಾಗಿ ವ್ಯಕ್ತಿಯೋರ್ವ ಸಾವನ್ನಪ್ಪಿರುವ ಘಟನೆ ರಾಜಾಜಿನಗರ ಸಂಚಾರಿ ಠಾಣಾ ವ್ಯಾಪ್ತಿಯಲ್ಲಿ ಭಾನುವಾರ ನಡೆದಿದೆ. ಬೆಳಗ್ಗೆ 10.30ರ ಸುಮಾರಿಗೆ ವ್ಯಕ್ತಿಯೋರ್ವರಿಗೆ ಕಾರು ಡಿಕ್ಕಿಯಾಗಿ ಪರಾರಿಯಾಗಿದೆ. ಮೃತರನ್ನು ಕೃಷ್ಣಪ್ಪ (55) ಎಂದು ಗುರುತಿಸಲಾಗಿದೆ.ಪ್ರಕಾಶ್ ನಗರದ ನಿವಾಸಿಯಾಗಿರುವ ಕೃಷ್ಣಪ್ಪ ಇಂದು ಬೆಳಗ್ಗೆ ರಾಜ್ ಕುಮಾರ್ ರಸ್ತೆ ಕಡೆ ನಡೆದುಕೊಂಡು ಹೋಗುತ್ತಿದ್ದರು.

ಈ ವೇಳೆ ನವರಂಗ್ ಸಿಗ್ನಲ್ ಬಳಿ ಕಾರು ಚಾಲಕ ಯೂಟರ್ನ್ ತೆಗೆಯುವಾಗ ಕೃಷ್ಣ ಪ್ಪ ಅವರಿಗೆ ಡಿಕ್ಕಿ ಹೊಡೆದಿದ್ದಾನೆ. ಡಿಕ್ಕಿ ಹೊಡೆದ ಪರಿಣಾಮ ಕೃಷ್ಣಪ್ಪ ಸ್ಥಳದಲ್ಲೇ ಕುಸಿದುಬಿದ್ದು ಸಾವನ್ನಪ್ಪಿದ್ದಾರೆ ಎಂದು ತಿಳಿದು ಬಂದಿದೆ. ಬಳಿಕ ಚಾಲಕ ಸ್ಥಳದಿಂದ ಪರಾರಿಯಾಗಿದ್ದಾನೆ. ಈ ಬಗ್ಗೆ ಪ್ರಕರಣ ದಾಖಲಿಸಿ ಕೊಂಡಿರುವ ರಾಜಾಜಿನಗರ ಸಂಚಾರ ಪೊಲೀಸರು ಪರಾರಿಯಾಗಿದ್ದ ಚಾಲಕನನ್ನು ವಶಕ್ಕೆ ಪಡೆದಿದ್ದಾರೆ.

# ತಂಬಾಕು ನಿಯಂತ್ರಣ ಕ್ರಮಗಳ ಕುರಿತು ಶಾಸಕರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ: ಅಧಿಕಾರಿಗಳು



**ಬೆಂಗಳೂರು:** ಜೂನ್ 26ರಿಂದ 28ರವರೆಗೆ ಶಾಸಕರಿಗೆ ಓರಿಯಂಟೇಶನ್ ಕಾರ್ಯಕ್ರಮ ನಡೆಯಲಿರುವ ಹಿನ್ನೆಲೆಯಲ್ಲಿ ರಾಜ್ಯ ತಂಬಾಕು ನಿಯಂತ್ರಣ ಕೋಶ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿಗಳು ತಂಬಾಕು ನಿಯಂತ್ರಣ ಕುರಿತು ಅಧಿವೇಶನ ನಡೆಸಲು ಮುಂದಾಗಿದ್ದಾರೆ.

ಈ ಅಧಿವೇಶನವು ವಿವಿಧ ತಂಬಾಕು ನಿಯಂತ್ರಣ ಕ್ರಮಗಳ ಬಗ್ಗೆ ಚುನಾಯಿತ ಪ್ರತಿನಿಧಿಗಳನ್ನು ಸಂವೇದನಾಶೀಲಗೊಳಿಸುವುದು ಮತ್ತು ಜಾಗೃತಿ ಮೂಡಿಸುವ ಗುರಿಯನ್ನು ಹೊಂದಿದೆ ಇದರಿಂದ ಅವರು ನೀತಿಗಳ ಉತ್ತಮ ಅನುಷ್ಠಾನಕ್ಕೆ ಸಹಾಯ ಮಾಡುತ್ತಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ನೆಲಮಂಗಲದಲ್ಲಿ ಶಾಸಕರಿಗೆ ಮೂರು ದಿನಗಳ ವಿಶೇಷ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. 'ತಂಬಾಕು ನಿಯಂತ್ರಣ ತಜ್ಞರು ನೀತಿಗಳನ್ನು ರೂಪಿಸಲು ಮತ್ತು ನಿರ್ಧಾರಗಳನ್ನು ತೆಗೆದುಕೊಳ್ಳಲು ಶಾಸಕರನ್ನು ಸಂವೇದನಾಶೀಲಗೊಳಿಸಲು ಮೂರು ದಿನಗಳ ಕಾರ್ಯಕ್ರಮದಲ್ಲಿ ಸಮಯ ನಿಗದಿಪಡಿಸುವಂತೆ ನಾವು ವಿಧಾನಸಭೆ ಸ್ಪೀಕರ್ ಯುಟಿ ಖಾದರ್ ಅವರಿಗೆ ಪ್ರಸ್ತಾವನೆಯನ್ನು ಸಲ್ಲಿಸಿದ್ದೇವೆ' ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

'ರಾಜ್ಯ ಮಟ್ಟದ ಸಿಗರೇಟ್ ಮತ್ತು ಇತರ ತಂಬಾಕು ಉತ್ಪನ್ನಗಳ ಕಾಯ್ದೆಗೆ (ಸಿಒಟಿಪಿಎ) ತಿದ್ದುಪಡಿ ತರಬೇಕಾಗಿದೆ. ತಿದ್ದುಪಡಿಯ ಅಗತ್ಯತೆಯ ಬಗ್ಗೆ ಚುನಾಯಿತ ಪ್ರತಿನಿಧಿಗಳು ಸಂವೇದನಾಶೀಲರಾದಾಗ, ಅವರು ಸದನದಲ್ಲಿ ತಿದ್ದುಪಡಿ ಮಸೂದೆಯನ್ನು ಮಂಡಿಸಿದಾಗ ಅಂಗೀಕರಿಸುವುದನ್ನು ಖಚಿತಪಡಿಸಿಕೊಳ್ಳುತ್ತಾರೆ' ಎಂದು ಅಧಿಕಾರಿ ಹೇಳಿದರು.ಹುಕ್ಕಾ ಬಾರ್‌ಗಳನ್ನು ನಿಷೇಧಿಸುವ ಬಗ್ಗೆ, ಹೋಟೆಲ್‌ಗಳು ಮತ್ತು ರೆಸ್ಟೋ ರೆಂಟ್‌ಗಳಲ್ಲಿ ಗೊತ್ತುಪಡಿಸಿದ ಧೂಮ ಪಾನ ಪ್ರದೇಶವನ್ನು ಒದಗಿಸುವುದು ಮತ್ತು ಎಲ್ಲಾ ರೀತಿಯ ತಂಬಾಕು ಜಾಹೀರಾ ತುಗಳನ್ನು ನಿಷೇಧಿಸುವ ಬಗ್ಗೆ ಚುನಾ ಯಿತ ಪ್ರತಿನಿಧಿಗಳ ಗಮನ ಸೆಳೆಯಲು ನಾವು ಬಯಸುತ್ತೇವೆ ಎಂದರು.

ಇದಲ್ಲದೆ, ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡಲು ಮಾರಾಟಗಾರನು ಪರವಾನಗಿಯನ್ನು ಪಡೆಯುವುದನ್ನು ಕಡ್ಡಾಯಗೊಳಿಸುವುದನ್ನು ಅವರು ಬಯಸುತ್ತಾರೆ ಎಂದು ಅಧಿಕಾರಿ ಹೇಳಿದರು. ರಾಜ್ಯ ತಂಬಾಕು ನಿಯಂತ್ರಣ ಕೋಶದ ನೇತೃತ್ವದಲ್ಲಿ ಇತರ ತಂಬಾಕು ನಿಯಂತ್ರಣ ತಜ್ಞರಾದ ಆಂಕೊಲಾಜಿಸ್ಟ್ ಡಾ.ವಿಶಾಲ್ ರಾವ್ ಮತ್ತು ಇತರರು ಶಾಸಕರಿಗೆ ಅಧಿವೇಶನವನ್ನು ನಡೆಸುವ ಸಾಧ್ಯತೆಯಿದೆ.

# ಅಂತಾರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ಹಾಗೂ ಕಳ್ಳಸಾಗಾಣಿಕೆ ವಿರೋಧಿ ದಿನ ಆಚರಣೆ: ವಾಕಥಾನ್ ನಲ್ಲಿ ಪಾಲ್ಗೊಂಡ ಡಿಸಿಎಂ






**ಬೆಂಗಳೂರು:** ಮಾದಕ ವಸ್ತುಗಳ ದುರ್ಬಳಕೆ ಮತ್ತು ಅಕ್ರಮ ಕಳ್ಳಸಾಗಣೆ ವಿರುದ್ಧದ ಅಂತಾರಾಷ್ಟ್ರೀಯ ದಿನವನ್ನು ವಿಶ್ವ ಮಾದಕ ವಸ್ತು ಬಳಕೆ ವಿರೋಧಿ ದಿನ ಎಂದು ಕರೆಯಲಾಗುತ್ತದೆ. (International Day against Drug abuse and illicit trafficking).ಇದನ್ನು ಪ್ರತಿ ವರ್ಷ ಜೂನ್ 26 ರಂದು ಮಾದಕ ವ್ಯಸನ ಮುಕ್ತ ಜಗತ್ತನ್ನು ನಿರ್ಮಿಸಲು ಕ್ರಮ ಮತ್ತು ಸಹಕಾರವನ್ನು ಬಲಪಡಿಸಲು ಆಚರಿಲಾಗುತ್ತದೆ. ಪ್ರತಿ ವರ್ಷ ಪ್ರಪಂಚದಾದ್ಯಂತದ ವಿವಿಧ ಸಂಸ್ಥೆಗಳು ವಿಶ್ವ ಮಾದಕ ವಸ್ತು ದಿನವನ್ನು ಆಚರಿಸುತ್ತವೆ. ಜೊತೆಗೆ ಸಮಾಜಕ್ಕೆ ನಿಷೇಧಿತ ಮಾದಕವಸ್ತುಗಳು ಉಂಟು ಮಾಡುವ ಪ್ರಮುಖ ಸಮಸ್ಯೆಯ ಬಗ್ಗೆ ಜಾಗೃತಿ ಮೂಡಿಸುತ್ತವೆ.

1987 ಡಿಸೆಂಬರ್ 7ರಂದು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಜೂನ್ 26 ಅನ್ನು ಅಂತಾರಾಷ್ಟ್ರೀಯ ಮಾದಕ ವಸ್ತುಗಳ ದುರುಪಯೋಗ ಮತ್ತು ಕಾನೂನು ಬಾಹಿರ ಸಾಗಾಟ ವಿರೋಧಿ ದಿನ ಎಂದು ಘೋಷಿ ಸಲಾಯಿತು.

ವಿಶ್ವದಾದ್ಯಂತ ಈ ದುಶ್ಚಟಗಳಿಗೆ ಇತ್ತೀಚಿನ ವರ್ಷಗಳಲ್ಲಿ ಮಕ್ಕಳು ಮತ್ತು ಯುವಕರು ಹೆಚ್ಚು ಬಲಿಯಾಗುತ್ತಿದ್ದಾರೆ. ಮಾದಕ ವಸ್ತುಗಳ ಮಾರಾಟ ಹಾಗೂ ಸಾಗಾಣೆ ಕಾನೂನ ಬಾಹಿರ ಎಂದು ಗೊತ್ತಿದ್ದರೂ ಇದರ ದಂಧೆ ಎಗ್ಗಿಲ್ಲದೆ ನಡೆಯುತ್ತಿದೆ. ಡ್ರಗ್ ಮಾಫಿಯಾ ಹತೋಟಿಗೆ ತರಲು ವಿಶ್ವದೆಲ್ಲೆಡೆ ಕಾನೂನು ಪ್ರಯತ್ನಗಳು ನಡೆಯುತ್ತಿವೆ. ಆದರೆ ಇದನ್ನು ಬುಡ ಸಮೇತ ಕಿತ್ತು ಹಾಕಲು ಸಾಧ್ಯವಾಗಿಲ್ಲ.

ವಾಕಥಾನ್ ಗೆ ಡಿಸಿಎಂ ಚಾಲನೆ: ಅಂತಾರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ಹಾಗೂ ಕಳ್ಳಸಾಗಾಣಿಕೆ ವಿರೋಧಿ ದಿನದ ಅಂಗವಾಗಿ ಇಂದು ವಿಧಾನಸೌಧ ಮುಂದೆ ಡಿಸಿಎಂ ಡಿ ಕೆ ಶಿವಕುಮಾರ್ ಚಾಲನೆ ನೀಡಿ ದರು. ನಂತರ ವಿಧಾನಸೌ ಧದಿಂದ ಕಂಠೀರವ ಸ್ಟೇಡಿಯಂ ವರೆಗೂ ಮಕ್ಕಳೊಂದಿಗೆ ಪಾದ ಯಾತ್ರೆಯಲ್ಲಿ ಪಾಲ್ಗೊಂಡರು. ಉತ್ತಮ ಸಮಾಜಕ್ಕೆ ಯುವ ಶಕ್ತಿಯೇ ಆಧಾರ ಸ್ತಂಭ. ಆದರೆ ಡ್ರಗ್ಸ್ ಚಟದಿಂದಾಗಿ ಯುವಶಕ್ತಿಯು ತಪ್ಪು ದಾರಿ ಹಿಡಿಯುತ್ತಿದೆ. ಯುವಕರಲ್ಲಿ ಜಾಗೃತಿ ಮೂಡಿಸುವ ಇಂತಹ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಕ್ಕಳೊಂದಿಗೆ ಹೆಜ್ಜೆ ಹಾಕುವುದು ನನಗೆ ತುಂಬಾ ಖುಷಿ ನೀಡಿದೆ ಎಂದು ನೆರೆದಿದ್ದ ಮಕ್ಕಳಿಗೆ, ಜನಸಮೂಹ, ಯುವಜನತೆಗೆ ಶಿವಕುಮಾರ್ ಸಂದೇಶ ನೀಡಿದರು.ಅಮಿತ್ ಶಾ ಸಂದೇಶ: ಮಾದಕ ದ್ರವ್ಯ ದುರ್ಬಳಕೆ ಮತ್ತು ಅಕ್ರಮ ಸಾಗಾಣಿಕೆ ವಿರುದ್ಧ ಅಂತಾರಾಷ್ಟ್ರೀಯ ದಿನದಂದು, ಮಾದಕ ದ್ರವ್ಯ ಪಿಡುಗಿನ ವಿರುದ್ಧ ದಿಟ್ಟತನದ ಹೋರಾಟವನ್ನು ನಡೆಸಿದ ಎಲ್ಲಾ ಮಾದಕ ದ್ರವ್ಯ ವಿರೋಧಿ ಯೋಧರಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಶುಭಾಶಯ ತಿಳಿಸಿದ್ದಾರೆ.

Editor:S.K.Wadeyar,#69"VISATHI", B,Block S.O.G . Colony Davanagere-577005,Karnatka. Publisher : S.K.Wadeyar #69VISATHI", B,Block S.O.G . Colony Davanagere-577005,Karnatka.
Printer:S.K.Wadeyar,.SUCHITHRA PRINTTERS & PUBLISHERS #69"VISATHI", B,Block S.O.G . Colony Davanagere-577005,Karnatka. Owner:S.K.Wadeyar #69"VISATHI", B,Block S.O.G . Colony Davanagere-577005,Karnatka.